ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ: 13 ಸಂಚಿಕೆ: 149

24–11–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 149

ಇಂದು ಜಾಗೃತಿ ಕಾರ್ಯಕ್ರಮ ಮತ್ತು ಜನ ಸಂವಾದ

ದಾವಣಗೆರೆ: ಕಾರ್ಮಿಕ ಇಲಾಖೆ, ಆರೋಗ್ಯ ಇಲಾಖೆ, ಪೋಲಿಸ್ ಇಲಾಖೆ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ& ನೆರಳು ಬೀಡಿ ಕಾರ್ಮಿಕರ ಯೂನಿಯನ್ ಸಂಯುಕ್ತ ಆಶ್ರಯದಲ್ಲಿ ಜಾಗೃತಿ ಕಾರ್ಯಕ್ರಮ & ಜನ ಸಂವಾದ ಕಾರ್ಯಕ್ರಮವನ್ನು ಬೆಳಿಗ್ಗೆ 11.30ಕ್ಕೆ ನಗರದ ದೇವರಾಜ್ ಅರಸ್ ಬಡಾವಣೆಯಲ್ಲಿ ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ದಾವಣಗೆರೆ ನೆರಳು ಬೀಡಿ ಕಾರ್ಮಿಕರ ಯೂನಿಯನ್‌ನ ಜಬೀನಾ ಖಾನಂ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ವಕೀಲರ ಸಂಘದ ನಿಕಟಪೂರ್ವ ಅಧ್ಯಕ್ಷರು ಮತ್ತು ಹಿರಿಯ ವಕೀಲರಾದ ಎಲ್.ಹೆಚ್. ಅರುಣ್‌ಕುಮಾರ್, ಬೆಂಗಳೂರಿನ ಸ್ತ್ರೀವಾದಿ ಮಹಿಳಾ ಹಕ್ಕುಗಳ ಹೋರಾಟಗಾರರು, ಗಮನ ಮಹಿಳಾ ಸಮೂಹದ ಶಕುನ್ , ದಾವಣಗೆರೆ ಬಳ್ಳಾರಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತ ಡಾ ಅವಿನಾಶ್ ನಾಯ್ಕ್, ಕುಟುಂಬ ಕಲ್ಯಾಣ ಇಲಾಖೆಯ ದೇವರಾಜ್ ಪಟ್ಟಿಗೆ, ಮಹಿಳೆಯರ ಮತ್ತು ಮಕ್ಕಳ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ॥ ಮಧು ಪಿ., ಪೊಲೀಸ್ ಇನ್ಸ್‌ಪೆಕ್ಟರ್‌ಗಳಾದ ವಸಂತ್ ಹೆಚ್.ಸಿ., ನಂಜುಂಡಸ್ವಾಮಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಭಿಕುಮಾರ್, ನೆರಳು ಬೀಡಿ ಕಾರ್ಮಿಕರ ಯೂನಿಯನ್ ಸದಸ್ಯ ಹೂರುನ್ನೀಸಾ ಇವರುಗಳು ಆಗಮಿಸಲಿದ್ದಾರೆ. ಕರಿಬಸಪ್ಪ ಎಂ. ಕಾರ್ಯಕ್ರಮ ನಿರೂಪಿಸುವರು. ನಾಹೇರ ಬಾನು ಸ್ವಾಗತಿಸುವರು.

ಕ್ರಿಕೆಟ್ ಪಂದ್ಯಾವಳಿ ಹಿನ್ನೆಲೆ ಬೈಕ್ ರ‍್ಯಾಲಿ

ದಾವಣಗೆರೆ: ಜಿಲ್ಲಾ ಚಿಲ್ಲರೆ ಮೊಬೈಲ್ ಮಾರಾಟಗಾರರ ಸಂಘದಿಂದ ಸಗಟು ಮಾರಾಟಗಾರರ ಬೆಂಬಲದೊಂದಿಗೆ ಕನ್ನಡ ರಾಜ್ಯೋತ್ಸವ ಅಂಗವಾಗಿ ನ.23ರಂದು ನಗರದ ಬಿಐಇಟಿ ಕಾಲೇಜು ಮೈದಾನದಲ್ಲಿ ನಡೆಯುವ 2ನೇ ವರ್ಷದ ದಾವಣಗೆರೆ ಮೊಬೈಲ್ ಪ್ರೀಮಿಯರ್ ಲೀಗ್–2025 ಕ್ರಿಕೆಟ್ ಪಂದ್ಯಾವಳಿ ಹಿನ್ನೆಲೆ ಇಂದು ನಗರದ ಹೈಸ್ಕೂಲ್ ಮೈದಾನದಲ್ಲಿ ಬೈಕ್ ರ್‍ಯಾಲಿ ಗೆ ದಾವಣಗೆರೆ ಮೊಬೈಲ್ ಮಾರಾಟಗಾರರ ಸಂಘದ ಕಾರ್ಯದರ್ಶಿ ಸಂತೋಷ ಕುಮಾರ್ ಓ ಎಸ್, ಉಪಾಧ್ಯಕ್ಷರು ಶ್ರೀನಿವಾಸ ಪಿಸಾಳೆ ಚಾಲನೆ ನೀಡಿದರು.
ಹೈಸ್ಕೂಲ್ ಮೈದಾನದಿಂದ ಬೈಕ್ ರ್‍ಯಾಲಿ ಆರಂಭಗೊಂಡು ಪಿಬಿ ರಸ್ತೆ, ಎ ಬಿ ಕೆ ಕಾಲೇಜ್ ರಸ್ತೆ,ಸಿಜಿ ಆಸ್ಪತ್ರೆ ರಸ್ತೆ, ಗುಂಡಿ ಸರ್ಕಲ್, ಡೆಂಟಲ್ ಕಾಲೇಜ್ ರಸ್ತೆ, ವಿದ್ಯಾನಗರ, ಹದಡಿ ರಸ್ತೆ ಮೂಲಕ ವಿದ್ಯಾರ್ಥಿಭವನ, ಅಂಬೇಡ್ಕರ್ ಸರ್ಕಲ್, ಜಯದೇವ ವೃತ್ತಕ್ಕೆ ಬಂದು ಮುಕ್ತಾಯಗೊಂಡಿತು.
ಈ ವೇಳೆ ಸಂಘದ ಖಜಾನ್ಸಿ ಕಿರಣ್.ರವಿನಾರಾಯಣ, ಶ್ಯಾಮ್ ಸುಂದರ್ ತುಳಸಿಯಾನ್, ಮಲ್ಲಿಕಾರ್ಜುನ ಸ್ವಾಮಿ, ರಾಹುಲ್ ಪವಾರ್, ಅರವಿಂದ, ಗಣೇಶ್ ರಮೇಶ್, ಅಮಿತ್ ಇದ್ದರು.

ವಿ.ಡಿ.ಕೌಶಿಕ್ 2ನೇ ಬಾರಿಗೆ ಅಧ್ಯಕ್ಷನಾಗಿ ಆಯ್ಕೆ

ಚಿಕ್ಕಮಗಳೂರು: ತಾಲೂಕಿನ ಕೂದುವಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ವಳಗೆರಹಳ್ಳಿಯ ವಿ.ಡಿ.ಕೌಶಿಕ್ ಅವಿರೋಧ ಆಯ್ಕೆಯಾಗಿದ್ದಾರೆ.
ಸಹಕಾರ ಸಂಘದ ಸಭಾಂಗಣದಲ್ಲಿ ಶನಿವಾರ ನಡೆದ ಚುನಾವಣೆಯಲ್ಲಿ ವಿ.ಡಿ.ಕೌಶಿಕ್ ಹೊರತು ಪಡಿಸಿ ಮತ್ಯಾರು ನಾಮಪತ್ರ ಸಲ್ಲಿಸದ ಹಿನ್ನಲೆಯಲ್ಲಿ ಚುನಾವಣಾಧಿಕಾರಿ, ಸಹಕಾರ ಇಲಾಖೆ ಸಿಡಿಒ ರುಕ್ಮಣಿ ಅವರು ವಿ.ಡಿ.ಕೌಶಿಕ್ ಅವರ ಅವಿರೋಧ ಆಯ್ಕೆಯನ್ನು ಘೋಷಿಸಿದರು.
ಅಭಿನಂದನೆ ಸ್ವೀಕರಿಸಿ ಮಾತನಾಡಿದ ಕೌಶಿಕ್, ಸಹಕಾರ ಸಂಘದ ನಿರ್ದೇಶಕರು ಮತ್ತು ಸದಸ್ಯರು ನಾಯಕರ ಸಹಕಾರದಿಂದ 2ನೇ ಬಾರಿಗೆ ಅಧ್ಯಕ್ಷನಾಗಿ ಆಯ್ಕೆಯಾಗಿದ್ದೇನೆ.
ಕೂದುವಳ್ಳಿ ಸೊಸೈಟಿಯನ್ನು ತಾಲೂಕಿನಲ್ಲೇ ಮಾದರಿಯನ್ನಾಗಿ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.
ಬಿಜೆಪಿ ಮುಖಂಡ ದೀಪಕ್ ದೊಡ್ಡಯ್ಯ ಮಾತನಾಡಿದರು, ಸಹಕಾರ ಸಂಘದ ಉಪಾಧ್ಯಕ್ಷ ಕೆ.ಜೆ ಸತೀಶ್, ನಿದೇಶಕರಾದ ಸಿ.ಡಿ ಭವಾನಿಶಂಕರ್, ಸಿ.ಡಿ ಉಮೇಶ್‌ಕುಮಾರ್, ಸುರೇಶ್ ಡಿ.ಜೆ, ಅಕ್ಷತಾ ಪೂರ್ಣೇಶ್, ಮಧುಸೂದನ್, ಅರವಿಂದ್, ಅನಿತಾ, ಕೆ.ಇ ಉಮೇಶ್, ರಮೇಶ್, ಪ್ರಶಾಂತ್, ಪವನ್ ಕುಮಾರ್, ಸೊಸೈಟಿ ಕಾರ್ಯದರ್ಶಿ ಜ್ಯೋತಿ ಹಾಗೂ ಸಿಬ್ಬಂದಿ ಮತ್ತು ಸೊಸೈಟಿ ವ್ಯಾಪ್ತಿಯ ಮುಖಂಡರು, ಸದಸ್ಯರು ಉಪಸ್ಥಿತರಿದ್ದರು.
ಅಪಾರ ಬೆಂಬಲಿಗರು ಹಾರತುರಾಯಿ ಹಾಕಿ ಅಭಿನಂದಿಸಿದರು.

ಮೆಕ್ಕೆಜೋಳ ಬೆಳೆಗೆ ಹೊಸ ಕಳೆನಾಶಕ

ದಾವಣಗೆರೆ/ ಚಿತ್ರದುರ್ಗ: ಭಾರತದ ಪ್ರಮುಖ ವೈವಿಧ್ಯಮಯ ಕೃಷಿ ಉದ್ಯಮಗಳಲ್ಲಿ ಒಂದಾಗಿರುವ ಗೋದ್ರೇಜ್ ಅಗ್ರೋವೆಟ್ ಲಿಮಿಟೆಡ್ (ಗೋದ್ರೇಜ್ ಅಗ್ರೋವೆಟ್), ವಿಶೇಷವಾಗಿ ಮೆಕ್ಕೆಜೋಳ ಬೆಳೆಗೆ ಹೊಸ ಕಳೆನಾಶಕವನ್ನು ಪರಿಚಯಿಸಿದೆ.ಐಎಕೆ ಜಪಾನ್ ಸಹಯೋಗದಲ್ಲಿ ಅಭಿವೃದ್ಧಿಪಡಿಸಲಾಗಿರುವ ಕಳೆನಾಶಕ 'ಅಶಿತಕ' ಭಾರತದಲ್ಲಿ ಮೆಕ್ಕೆಜೋಳ ರೈತರು ಎದುರಿಸುತ್ತಿರುವ ಪ್ರಮುಖ ಸವಾಲಾಗಿರುವ ಹುಲ್ಲು ಮತ್ತು ಅಗಲವಾದ ಹೊಂದಿರುವ ಕಳೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಹೊಸ ಪರಿಹಾರವಾಗಿದೆ. ಮೆಕ್ಕೆಜೋಳ ಬೆಳೆಗೆ ಕಳೆ ಬಾಧೆ ಪ್ರಮುಖ ಸಮಸ್ಯೆಯಾಗಿದ್ದು, ಆರಂಭಿಕ ಬೆಳವಣಿಗೆಯ ಹಂತಗಳಲ್ಲಿ, ಅಶಿತಕವನ್ನು 2&4 ಎಲೆಗಳ ಹಂತದಲ್ಲಿ ಅನ್ವಯಿಸಿದರೆ, ಕಳೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಬಹುದು. ಎಂದು ಗೋದ್ರೇಜ್ ಅಗ್ರೋವೆಟ್ ಬೆಳೆ ಸಂರಕ್ಷಣಾ ವಹಿವಾಟಿನ ಸಿಇಒ ರಾಜವೇಲು ಎನ್.ಕೆ. ಪ್ರಕಟಣೆಯಲ್ಲಿ ಹೇಳಿದ್ದಾರೆ.

ಕಾರ್ಮಿಕ ಸಂಹಿತೆಗಳ ಜಾರಿಗೆ ವಿರೋಧ, ಅಧಿಸೂಚನೆಗೆ ಸಿಐಟಿಯು ಪ್ರತಿಭಟನೆ

ದಾವಣಗೆರೆ: ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಕಾರ್ಮಿಕ ವಿರೋಧಿ, ಉದ್ಯೋಗದಾತರ ಪರ ಕಾರ್ಮಿಕ ಸಂಹಿತೆಗಳನ್ನು ಏಕಪಕ್ಷೀಯ ಅನುಷ್ಠಾನ ಮಾಡಲು ಮುಂದಾಗಿ ಅಧಿಸೂಚನೆ ಪ್ರಕಟಿಸಿದೆ ಇದು ದೇಶದ ದುಡಿಯುವ ಜನರ ವಿರುದ್ಧ ಕೇಂದ್ರ ಸರ್ಕಾರ ಮಾಡಿದ ಮೋಸದ ವಂಚನೆ ಎಂದು ಸಿ.ಐ.ಟಿ.ಯು. ರಾಜ್ಯ ಕಾರ್ಯದರ್ಶಿ ಕೆ.ಮಹಾಂತೇಶ್ ಆಕ್ರೋಶ ವ್ಯಕ್ತಪಡಿಸಿದರು.

ದಾವಣಗೆರೆ ಜಯದೇವ ವೃತ್ತದಲ್ಲಿ ಕೇಂದ್ರ ಸರ್ಕಾರದ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಸಿ.ಐ.ಟಿ.ಯು. ಜಿಲ್ಲಾ ಸಮಿತಿ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಅವರು
21 ನವೆಂಬರ್ 2025 ರಂದು ಅಧಿಸೂಚನೆ ಗೊಳ್ಳುವ ಪೂರ್ವದಲ್ಲಿ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್ ಕರೆದ ಸಭೆಯಲ್ಲಿ ನಾಲ್ಕು "ಕಾರ್ಮಿಕ ಸಂಹಿತೆಗಳು" ಎಂಬ ಈ ಅನಿಯಂತ್ರಿತ ಮತ್ತು ಪ್ರಜಾಪ್ರಭುತ್ವ ವಿರೋಧಿ ಅಧಿಸೂಚನೆಯು ಎಲ್ಲಾ ಪ್ರಜಾಸತ್ತಾತ್ಮಕ ನೀತಿಗಳನ್ನು ಧಿಕ್ಕರಿಸುತ್ತದೆ ಮತ್ತು ಭಾರತದ ಕಲ್ಯಾಣ ರಾಜ್ಯದ ಸ್ವರೂಪವನ್ನು ನಾಶಮಾಡಲಿದೆ ಎಂದು ಸಿ.ಐ.ಟಿ.ಯು. ಹಾಗೂ ಇತರೆ ಕೇಂದ್ರ ಕಾರ್ಮಿಕ ಸಂಘಗಳು ಪ್ರತಿರೋಧ ವ್ಯಕ್ತಪಡಿಸಿದ್ದವು ಆದರೆ ಅದನ್ನು ಕಡೆಗಣಿಸಿರುವ ಕೇಂದ್ರ ಸರ್ಕಾರ ಬಿಹಾರ ಚುನಾವಣೆಯ ವಿಜಯದಿಂದ ಬೀಗಿ ಈ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಜಾರಿ ಘೋಷಿಸಿದೆ. ಇದರಿಂದ ಭವಿಷ್ಯದಲ್ಲಿ ಕೋಟ್ಯಾಂತರ ಶ್ರಮಜೀವಿಗಳ ಬದುಕು ಅತಂತ್ರಗೊಳ್ಳಲಿದೆ ಎಂದು ಕೆ. ಮಹಾಂತೇಶ್ ಅಪಾದಿಸಿದರು.
ಕೇಂದ್ರ ಸರ್ಕಾರ ಕೂಡಲೇ ಭಾರತೀಯ ಕಾರ್ಮಿಕ ಸಮ್ಮೇಳನವನ್ನು (ಖಐಒ) ತಕ್ಷಣವೇ ಕರೆಯುವಂತೆ ಒತ್ತಾಯಿಸಿದೆ ಮತ್ತು ಇದೇ ನವೆಂಬರ್26 ರಂದು ಸಂಯುಕ್ತ ಕಿಸಾನ ಮೋರ್ಚ(ಖಐಒ) ಹಾಗೂ ಕೇಂದ್ರ ಕಾರ್ಮಿಕ ಸಂಘಗಳ ಜಂಟಿ ವೇದಿಕೆ(ಎಅಖಿಗ) ನೇತೃತ್ವದಲ್ಲಿ ದೇಶಾದ್ಯಂತ ಪ್ರತಿಭಟನೆ ಕರೆ ನೀಡಿದೆ ಅಂದು ಹರಿಹರ ಪಾಲಿಪೈಬರ್ಸ್, ಗ್ರಾಸಿಂ ಹಾಗೂ ರಾಮ್ ಕೊ ಕಂಪನಿ ಕಾರ್ಮಿಕರು ಸಿ.ಐ.ಟಿ.ಯು. ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಿದ್ದಾರೆ ಎಂದು ಸಿ.ಐ.ಟಿ.ಯು. ಜಿಲ್ಲಾ ಸಂಚಾಲಕ ಕೆ. ಮುದಿಮಲ್ಲನಗೌಡ ಹೇಳಿದರು.
ಕಾರ್ಮಿಕ ಸಂಹಿತೆಗಳ ಜಾರಿಯಿಂದ ಕಟ್ಟಡ ನಿರ್ಮಾಣ ಕಾರ್ಮಿಕರು ಹಾಲಿ ಇರುವ ಸೌಲಭ್ಯಗಳಿಂದ ವಂಚಿತರಾಗಲಿದ್ದಾರೆ. ಕಲ್ಯಾಣ ಮಂಡಳಿಗಳು ಮುಚ್ಚುವ ಅಪಾಯಗಳಿವೆ ಗುತ್ತಿಗೆ ಕಾರ್ಮಿಕರು ಮತ್ತಷ್ಟು ಶೋಷಣೆಗೆ ಒಳಗಾಗಲಿದ್ದಾರೆ ಎಂದು ಸಿ.ಐ.ಟಿ.ಯು. ರಾಜ್ಯ ಕಾರ್ಯದರ್ಶಿ ಕೆ.ಹೆಚ್. ಆನಂದರಾಜು ಆರೋಪಿಸಿದರು.

ಕಾರ್ಮಿಕ ಸಂಹಿತೆಗಳನ್ನು ಹಿಂಪಡೆಯಬೇಕು ಮತ್ತು ಮನುಸ್ಮೃತಿ ಆಧಾರಿತ ಶ್ರಮ ಶಕ್ತಿ ನೀತಿ 2025 ರ ಕರಡನ್ನು ಹಿಂತೆಗೆದುಕೊಳ್ಳಬೇಕೆಂದು ಹರಿಹರ ಪಾಲಿಪೈಬರ್ಸ್ ಕಾರ್ಮಿಕ ಸಂಘದ ಪ್ರಧಾನ ಕಾರ್ಯದರ್ಶಿ ಕೋಟ್ರೇಶ ಓಲೇಕಾರ್ ಆಗ್ರಹಿಸಿ ಇಲ್ಲದಿದ್ದರೆ ಭಾರತದ ದುಡಿಯುವ ಜನರು ತೀವ್ರ ಪ್ರತಿಭಟನೆಯ ಕೇಂದ್ರ ಸರ್ಕಾರ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ
ಕಟ್ಟಡ ಕಾರ್ಮಿಕ ಸಂಘಟನೆಯ ಜಿಲ್ಲಾ ಅಧ್ಯಕ್ಷರಾದ ಮಂಜುನಾಥ್ ಜಿ.ಡಿ. ಖಜಾಂಚಿಯಾದ ನೇತ್ರಾವತಿ, ಗಜೇಂದ್ರ, ಹನುಮಂತಪ್ಪ, ಮಂಜುನಾಥ್, ಮುರುಳಿ, ಶಿವಪ್ಪ, ಹಾಸ್ಟೆಲ್ ಹೊರಗುತ್ತಿಗೆ ನೌಕರರ ಸಂಘದ ಮುಖಂಡರಾದ ಹಾಲೇಶ್ ನಾಯಕ್, ಸದಾಶಿವ ನಾಯಕ್, ಎಲ್.ಐ.ಸಿ. ಏಜೆಂಟ್ಸ್ ಯೂನಿಯನ್ ಜಿಲ್ಲಾ ಮುಖಂಡರಾದ ಸವಿತಾ ಜಿ.ಜಿ., ಆಟೋ ಚಾಲಕರ ಸಂಘದ ಮುಖಂಡರಾದ ಶ್ರೀನಿವಾಸ ಮೂರ್ತಿ, ಬೀದಿಬದಿ ಮಾರಾಟಗಾರರ ಸಂಘದ ನಾಗರಾಜ್, ಗ್ರಾಸಿಂ ನೌಕರರ ಸಂಘದ ಮಂಜುನಾಥ್, ಎಚ್ ಪಿ ಎಫ್ ನೌಕರರ ಸಂಘದ ವಿನಯ್ ಕುಮಾರ್ ಮತ್ತಿತರರು ಭಾಗವಹಿಸಿದ್ದರು

ದೇಶದ ಅತ್ಯುನ್ನತ ಹುದ್ದೆಗಳು ಕೇವಲ ಉಳ್ಳವರ ಕೈಯಲ್ಲಿದೆ: ಜಿ.ಬಿ. ವಿನಯ್‌ಕುಮಾರ್ ಬೇಸರ

ದಾವಣಗೆರೆ: ಐಎಎಸ್, ಐಪಿಎಸ್ ಸೇರಿದಂತೆ ದೇಶದ ಅತ್ಯುನ್ನತ ಹುದ್ದೆಗಳು ಕೇವಲ ಉಳ್ಳವರ ಕೈಯಲ್ಲಿದೆ. ಬಡವರು, ಹಿಂದುಳಿದವರು, ಶೋಷಿತರಿಗೆ ಜಾಗೃತಿ ಮತ್ತು ಮಾಹಿತಿ ಇಲ್ಲದಂತೆ ಮಾಡಿ ಅಂಧಕಾರದಲ್ಲಿಡುವ ಕೆಲಸ ಮಾಡಲಾಗುತ್ತದೆ. ಇದರಿಂದಾಗಿ ದೇಶದಲ್ಲಿ ಅಸಮಾನತೆ ಇನ್ನೂ ಆಳವಾಗಿ ಉಳಿಯುವಂತೆ ಮಾಡಲಾಗಿದೆ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ಬೇಸರ ವ್ಯಕ್ತಪಡಿಸಿದರು.



ದಾವಣಗೆರೆ ತಾಲೂಕಿನ ಹೂವಿನಮಡು ಶ್ರೀ ವಾಲ್ಮೀಕಿ ಮಹರ್ಷಿ ವಿದ್ಯಾಸಂಸ್ಥೆ ಮತ್ತು ಶ್ರೀ ಮಾರುತಿ ಪ್ರೌಢಶಾಲೆ ಸಂಯುಕ್ತಾಶ್ರಯದಲ್ಲಿ ಆಂಜನೇಯ ನಗರದಲ್ಲಿ ಏರ್ಪಡಿಸಿದ್ದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ 2025– 26ರ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ರಾಜಕಾರಣಿಗಳು, ಅಧಿಕಾರಿಗಳು ಸೇರಿದಂತೆ ದೊಡ್ಡವರೆಲ್ಲರೂ ಸೇರಿಕೊಂಡು ಬಡವರು, ಹಿಂದುಳಿದವರು, ಶೋಷಿತರಿಗೆ ಅವಕಾಶ ಸಿಗದಂತೆ ಮಾಡುತ್ತಿರುವುದು ದುರ್ದೈವದ ಸಂಗತಿ ಎಂದು ತಿಳಿಸಿದರು.
ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿದಾಗಿನಿಂದ ಸುಮಾರು 25 ಜಿಲ್ಲೆಗಳಲ್ಲಿ ಪ್ರವಾಸ ಮಾಡಿದ್ದೇನೆ. ತಾಲೂಕು, ಜಿಲ್ಲಾ ಕೇಂದ್ರಗಳಿಗೂ ಹೋಗಿದ್ದೇನೆ. ಆದರೆ ಎಲ್ಲಾ ಕಡೆಗಳಲ್ಲಿ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಸೂಕ್ತ ಸೌಲಭ್ಯ, ಅವಕಾಶ ಮತ್ತು ಸಹಕಾರ, ಬೆಂಬಲ ದೊರೆಯದೇ ಉನ್ನತ ಹುದ್ದೆಗಳಿಗೆ ಹೋಗಲು ಸಾಧ್ಯವಾಗುತ್ತಿಲ್ಲ ಎಂಬುದು ತಿಳಿದು ಬಂತು. ಮುಂದಿನ ದಿನಗಳಲ್ಲಿ ನೀವೂ ಐಎಎಸ್, ಐಪಿಎಸ್ ಆಗುವಂತಾಗಬೇಕು ಎಂಬುದು ನನ್ನ ಆಸೆ ಎಂದು ಹೇಳಿದರು.

ಸರಿಯಾದ ಮಾಹಿತಿ, ಸೂಕ್ತ ಅವಕಾಶ ಸಿಕ್ಕರೆ ಪ್ರತಿಯೊಬ್ಬ ಮಕ್ಕಳೂ ಐಎಎಸ್, ಐಪಿಎಸ್ ಆಗುವ ಸಾಮರ್ಥ್ಯ ಹೊಂದಿದ್ದಾರೆ. ಅವಕಾಶ, ವೇದಿಕೆ, ಬೆಂಬಲ ಮತ್ತು ಸಹಕಾರ ದೊರೆಯುವುದರ ಮೇಲೆ ಹಳ್ಳಿ ಮಕ್ಕಳ ಭವಿಷ್ಯ ನಿಂತಿದೆ. ದಾವಣಗೆರೆ ಜಿಲ್ಲೆಯೊಂದರಲ್ಲಿಯೇ ಐದಾರು ಲಕ್ಷ ಮಕ್ಕಳಿದ್ದಾರೆ. 15ರಿಂದ 20 ಸಾವಿರ ಶಿಕ್ಷಕರಿದ್ದಾರೆ. ಸಾವಿರಾರು ವೈದ್ಯರಿದ್ದಾರೆ. ಆದರೆ ದಾವಣಗೆರೆ ಜಿಲ್ಲೆಯಲ್ಲಿರುವುದು ಕೇವಲ ಮೂವರು ಐಎಎಸ್ ಅಧಿಕಾರಿಗಳು ಮಾತ್ರ. ಪ್ರತಿಯೊಂದನ್ನೂ ನೋಡಿಕೊಳ್ಳುವ ಗುರುತರ ಜವಾಬ್ದಾರಿ ಜಿಲ್ಲಾಧಿಕಾರಿಯವರ ಮೇಲಿರುತ್ತದೆ. ಜಿಲ್ಲೆಯ ಕಾನೂನು ಮತ್ತು ಸುವ್ಯವಸ್ಥೆ, ಆರೋಗ್ಯ, ಶಿಕ್ಷಣ, ರೈತರು ಸೇರಿದಂತೆ ಎಲ್ಲಾ ವರ್ಗದವರಿಗೂ ಸೌಲಭ್ಯ ಕಲ್ಪಿಸುವ ಕುರಿತಂತೆ ಮೇಲುಸ್ತುವಾರಿ ನೋಡಿಕೊಳ್ಳುತ್ತಾರೆ. ಜಿಲ್ಲೆಯ ಸುಪ್ರೀಂ ಸಹ ಡಿಸಿಯೇ ಆಗಿರುತ್ತಾರೆ ಎಂದು ಹೇಳಿದರು.

ಮಕ್ಕಳು ಮಹತ್ವಾಕಾಂಕ್ಷಿಗಳಾಗಿರಬೇಕು. ಎಲ್ಲರೂ ಕನಸು ಕಾಣುತ್ತಾರೆ. ಆದರೆ ಕೆಲವರು ಶಿಕ್ಷಕರು, ವೈದ್ಯರು, ಎಂಜಿನಿಯರ್ ಸೇರಿದಂತೆ ತಾನು ಓದಿದ್ದಕ್ಕೆ ಕೆಲಸ ಸಿಕ್ಕರೆ ಸಾಕು ಎಂದು ತೃಪ್ತಿಪಟ್ಟುಕೊಂಡು ಸುಮ್ಮನಾಗಿಬಿಡುತ್ತಾರೆ. ಸಾಮರ್ಥ್ಯವಿದ್ದರೂ ಮುಂದಡಿ ಇಡುವುದಿಲ್ಲ. ಲಕ್ಷಾಂತರ ಬಡವರಿಗೆ ಸಹಾಯ ಮಾಡುತ್ತೇನೆಂಬ ಆಸೆ ಹೊಂದಿದ್ದರೂ ಈಡೇರಬೇಕಾದರೆ ಸಾಮರ್ಥ್ಯ ಮತ್ತು ಪ್ರತಿಭೆಯನ್ನು ನೀವೇ ಜಾಸ್ತಿ ಮಾಡಿಕೊಳ್ಳಬೇಕು ಎಂದು ಹೇಳಿದರು.

ಪ್ರತಿದಿನ ಒಂದು ಅಥವಾ ಎರಡು ಪತ್ರಿಕೆಗಳನ್ನು ಓದುತ್ತೇನೆಂಬ ನಿರ್ಧಾರ ಮಾಡಿ. ದೇಶ ಮತ್ತು ದೇಶದ ಆಚೆ ನಡೆಯುವ ಘಟನೆಗಳ ವಿಶ್ಲೇಷಣೆ ಮಾಡುವುದನ್ನು ರೂಢಿಸಿಕೊಳ್ಳಬೇಕು ಎಂದು ಜಿ. ಬಿ. ವಿನಯ್ ಕುಮಾರ್ ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯ ಶ್ರೀನಿವಾಸ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಶ್ಯಾಗಲೆಯ ಕುವೆಂಪು ಶಾಲೆಯ ಸಿದ್ದಣ್ಣ, ನಾಗರಸನಹಳ್ಳಿಯ ಮುಖ್ಯೋಪಾಧ್ಯಾಯರಾದ ಮೊಹಮ್ಮದ್ ಗೌಸ್, ಅನುದಾನಿತ ಶಾಲೆಯ ಅಧ್ಯಕ್ಷ ರಾಜಪ್ಪ, ಸಹ ಶಿಕ್ಷಕಿ ಅಂಬುಜಾ, ಸಹ ಶಿಕ್ಷಕ ಗೋಪಾಲಯ್ಯ, ಶಾಲೆಯ ಶಿಕ್ಷಕ ವೃಂದದವರು ಹಾಗೂ ಶಾಲೆಯ ಎಸ್ ಡಿಎಂಸಿ ಅಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

ಜೈನ್ ಕಾಲೇಜಿನಲ್ಲಿ ವಿಜೃಂಭಣೆಯ ಎಥ್ನಿಕ್ ಡೇ

ದಾವಣಗೆರೆ: ಜೈನ್ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನ

ರಾಶಿ ಭವಿಷ್ಯ

ಮೇಷ ರಾಶಿ

ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ.

ವೃಷಭ ರಾಶಿ

ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧಗಳನ್ನು ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು ಮತ್ತು ಅವರ ಆರೋಗ್ಯದ ಮೇಲೆ ಬಹಳಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

ಮಿಥುನ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೋಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ. ಮೊಂಬತ್ತಿ ಬೆಳಕಿನಲ್ಲಿ ಪ್ರೀತಿಪಾತ್ರರ ಜೊತೆ ಆಹಾರ ಹಂಚಿಕೊಳ್ಳುವುದು.

ಕರ್ಕ ರಾಶಿ

ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು.
ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

ಸಿಂಹ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ.
ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಇಂದು ನೀವು ಕುರುಡುಪ್ರೀತಿಯನ್ನು ಪಡೆಯಲು ಸಾಧ್ಯವಾಗುತ್ತದೆ. ಯಾರಾದರೂ ಇಂದು ಕೆಲಸದಲ್ಲಿ ನಿಮಗೆ ಸಂತೋಷವಾಗುವ ಏನನ್ನಾದರೂ ಮಾಡಬಹುದು. ಇಂದು ನೀವು ಮನೆಯ ಕಿರಿಯ ಸದಸ್ಯರೊಂದಿಗೆ ಉದ್ಯಾನವನ ಅಥವಾ ಶಾಪಿಂಗ್ ಮಾಲ್‌ಗೆ ಹೋಗಬಹುದು.

ಕನ್ಯಾ ರಾಶಿ

ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನಿಮ್ಮ ಕುಟುಂಬದ ಸದಸ್ಯರು ನಿಮ್ಮ ಪ್ರಯತ್ನ ಮತ್ತು ಸಮರ್ಪಣೆಯನ್ನು ಪ್ರಶಂಸಿಸುತ್ತಾರೆ ನಿಮ್ಮ ಪ್ರೇಮಿಯೆಡೆಗೆ ಸೇಡು ಹೊಂದುವುದು ಯಾವುದೇ ಫಲ ತರುವುದಿಲ್ಲ ಅದರ ಬದಲಿಗೆ ನೀವು ಶಾಂತರಾಗಿರಬೇಕು ಮತ್ತು ನಿಮ್ಮ ಪ್ರೇಮಿಗೆ ನಿಮ್ಮ ನಿಜವಾದ ಪ್ರೀತಿಯನ್ನು ವಿವರಿಸಬೇಕು.

ತುಲಾ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೋಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಇಂದು ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು.

ವೃಶ್ಚಿಕ ರಾಶಿ

ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

ಧನು ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು.

ಮಕರ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ.
ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ಸ್ನೇಹಿರೊಂದಿಗಿನ ಸಂಜೆ ಹೆಚ್ಚು ಮನರಂಜನೀಯವಾಗಿರುತ್ತದೆ ಮತ್ತು ಸಂತೋಷದಿಂದ ತುಂಬಿರುತ್ತದೆ. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ. ಹೌದು,ನೀವು ಅದೃಷ್ಟವಂತರು.

ಕುಂಭ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವಿಫಲವಾಗಿ ನಿಮಗೆ ನಿರಾಶೆಯುಂಟುಮಾಡಬಹುದು. ನಿಮ್ಮ ಕನಸು ನನಸಾಗಿಸಲು ನೀವು ಅವರನ್ನು ಪ್ರೋತ್ಸಾಹಿಸಬೇಕು. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ.

ಮೀನ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು.
ಸಮಯಕ್ಕೆ ನೀವು ಜಾಗರೂಕರಾಗಿದ್ದರೆ ಅದು ನಿಮಗೆ ಉತ್ತಮವಾಗಿರುತ್ತದೆ. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ. ನಿಮ್ಮ ಕಣ್ಣೀರನ್ನು ಒಬ್ಬ ವಿಶೇಷ ಸ್ನೇಹಿತ ಒರೆಸಬಹುದು. ಕೆಲವರಿಗೆ ವ್ಯಾಪಾರ ಮತ್ತು ಶಿಕ್ಷಣ ಪ್ರಯೋಜನ ತರುತ್ತದೆ. ಸಂತಸದ ಪ್ರಯಾಣ ತೃಪ್ತಿಕರವಾಗಿರುತ್ತದೆ

ಬ್ರಹ್ಮವನದ ಶ್ರೀ ಸೋಮೇಶ ಹಾಡು ಲೋಕಾರ್ಪಣೆ

ಚಿಕ್ಕಮಗಳೂರು: ನಗರದ ಕಲ್ಕಟ್ಟೆ ಪುಸ್ತಕದ ಮನೆಯವರು ಹೆಚ್.ಎನ್.ಮಲ್ಲೇಶರಾವ್ ಅವರ ಸಂಸ್ಮರಣೆಯಲ್ಲಿ ಹೊರತರುತ್ತಿರುವ ಕಲ್ಕಟ್ಟೆ ಗಾನ ದೀವಿಗೆ ಸರಣಿಯ 40ನೇ ಭಕ್ತಿಗೀತೆ 'ಬ್ರಹ್ಮವನದ ಶ್ರೀ ಸೋಮೇಶ' ಲೋಕಾರ್ಪಣೆ ಸಮಾರಂಭ ಇತ್ತೀಚೆಗೆ ಕೊಪ್ಪ ತಾಲ್ಲೂಕಿನ ನುಗ್ಗಿ ಸಮೀಪದ ಬ್ರಹ್ಮವನದ ಶ್ರೀ ಸೋಮೇಶ್ವರ ದೇವಾಲಯದ ಆವರಣದಲ್ಲಿ ನಡೆಯಿತು.

ಭಕ್ತಿ ಗೀತೆ ಲೋಕಾರ್ಪಣೆಗೊಳಿಸಿದ ದೇವಾಲಯದ ಆಡಳಿತ ಮಂಡಳಿಯ ಮಂಜುನಾಥ್ ಮಾತನಾಡಿ, ನಮ್ಮೂರ ಕವಯತ್ರಿ ನಾಗಶ್ರೀ ಗಣಪತಿ ಬರೆದಿರುವ ಈ ಹಾಡಿಗೆ ರಾಗ ಸಂಯೋಜನೆ ಮಾಡಿ, ಹಾಡಿರುವ ನಾಗರಾಜರಾವ್ ಕಲ್ಕಟ್ಟೆಯವರು ತಾವು ಬೆಳೆಯುತ್ತಿರುವುದಲ್ಲದೆ, ಗ್ರಾಮೀಣ ಪ್ರತಿಭೆಗಳಿಗೂ ಅವಕಾಶ ನೀಡಿರುವುದು ನಿಜಕ್ಕೂ ಶ್ಲಾಘನೀಯ. ಸ್ವಾಮಿಯ ಸನ್ನಿಧಿಯಲ್ಲಿ ಅದರಲ್ಲೂ ಹದಿನೈದನೇ ವಾರ್ಷಿಕೋತ್ಸವದ ಸುಸಂದರ್ಭದಲ್ಲಿ ಈ ಗೀತೆ ಹೊರಬರುತ್ತಿರುವುದು ನಮಗೆಲ್ಲ ಹೆಮ್ಮೆ. ಯಾರಿಂದ ಯಾವ ಸೇವೆ ಮಾಡಿಕೊಳ್ಳಬೇಕು ಎಂಬುದನ್ನು ದೇವರೇ ನಿರ್ಧರಿಸುತ್ತಾನೆ ಎಂಬುದನ್ನು ನಾನು ನಂಬುತ್ತೇನೆ ಎಂದರು.

ಸಂಗೀತ ನಿರ್ದೇಶಕ, ಗಾಯಕ ನಾಗರಾಜರಾವ್ ಕಲ್ಕಟ್ಟೆ ಮಾತನಾಡಿ, ವಿಶೇಷ ಚೇತನ ಪ್ರತಿಭೆ ನಾಗಶ್ರೀ ಗಣಪತಿಯವರು ನಿತ್ಯ ನಿರಂತರ ಬರಹಗಾರ್ತಿ. ಅವರ ಕತೆ, ಕವನ, ಲೇಖನಗಳು ವಾಟ್ಸಪ್ ಗುಂಪುಗಳಲ್ಲಿ, ಫೇಸ್ಬುಕ್‌ಗಳಲ್ಲಿ ಪ್ರತಿದಿನವೂ ಬರುತ್ತದೆ. ಈ ಗ್ರಾಮೀಣ ಪ್ರತಿಭೆಗೆ ಸೂಕ್ತ ಪ್ರೋತ್ಸಾಹ ಸಿಕ್ಕರೆ ಖಂಡಿತಾ ಹೆಮ್ಮರವಾಗಿ ಬೆಳೆಯುತ್ತಾರೆ. ಈ ಭಕ್ತಿಗೀತೆಯಲ್ಲಿ ಅವರ ದೇವ ಶ್ರದ್ಧೆ ಮತ್ತು ಹಿರಿಯರ ಕುರಿತಾದ ಶ್ರದ್ಧೆ ಎದ್ದು ಕಾಣುತ್ತಿದೆ. ಕಲ್ಕಟ್ಟೆ ಪುಸ್ತಕದಮನೆ ಕೇವಲ ನಮ್ಮ ಜಿಲ್ಲೆಗೆ ಮಾತ್ರ ಸೀಮಿತವಾಗಿರದ ರಾಜ್ಯದ ಹಲವಾರು ಜಿಲ್ಲೆಗಳ ಪ್ರತಿಭೆಗಳ ಜೊತೆಗೆ ನಿಲ್ಲುತ್ತಿದೆ. ನಮ್ಮ ಸರಣಿಯ ಪ್ರತಿ ಗೀತೆಗಳಿಗೂ ಹಿನ್ನೆಲೆ ಸಂಗೀತ ನೀಡುವ, ಅಗತ್ಯ ಬಿದ್ದಲ್ಲಿ ಹಾಡುವ, ಧ್ವನಿಗ್ರಹಣ ಮತ್ತು ವೀಡಿಯೋ ಸಂಕಲನ ಮಾಡುವ ಕೆ.ಎನ್.ನಾಗಭೂಷಣ್ ಹಾಗೂ ನಿರ್ಮಾಪಕಿ ರೇಖಾನಾಗರಾಜರಾವ್ ಅವರ ಸಹಕಾರದಿಂದ ಇದು ಮುಂದುವರಿಯುತ್ತಿದೆ ಎಂದರು.

ಕವಯತ್ರಿ ನಾಗಶ್ರೀ ಗಣಪತಿ ಮಾತನಾಡಿ ನಾನು ಭಕ್ತಿಗೀತೆಗಳನ್ನು ಬರೆಯಲು ಈ ದೇವಾಲಯ ಮತ್ತು ಈ ಸುಂದರ ಪ್ರಕೃತಿಯು ಪ್ರೇರಣೆ ನೀಡಿವೆ. ನನ್ನ ಮಾನಸ ಗುರುಗಳಾದ ನಾಗರಾಜರಾವ್ ಕಲ್ಕಟ್ಟೆಯವರ ಮಾರ್ಗದರ್ಶನ ಮತ್ತು ಪ್ರೋತ್ಸಾಹ ನನಗೆ ಬರೆಯಲು ಮತ್ತಷ್ಟು ಪ್ರೇರಣೆ ನೀಡುತ್ತಿದೆ. ಕಡು ಬಡತನವಿದ್ದರೂ ನನ್ನ ತಂದೆ ತಾಯಿ ನನಗೆ ಬೆಂಬಲವಾಗಿ ನಿಂತಿದ್ದಾರೆ. ಊರ ಜನರ ಪ್ರೋತ್ಸಾಹವೂ ಇದೆ. ಇವೆಲ್ಲ ಸಾಧನೆಯನ್ನು ಮಾಡಲು ಹುರಿದುಂಬಿಸುತ್ತವೆ ಎಂದರು.

ಗ್ರಾಮದ ಹಿರಿಯರಾದ ಚಿನ್ನಯ್ಯ, ಪುರೋಹಿತರಾದ ಜಗದೀಶ್, ನಾಗಶ್ರೀ ಪೋಷಕರಾದ ಗಣಪತಿ, ಜಯಂತಿ, ರತ್ನಾಕರ, ಶ್ರೀನಿವಾಸಗೌಡ, ಆಶಾ ಮೊದಲಾದವರು ಉಪಸ್ಥಿತರಿದ್ದರು.

ಕುರೇಕುಪ್ಪ ಪುರಸಭೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ್

ಬಳ್ಳಾರಿ: ಕುರೇಕುಪ್ಪ ಪುರಸಭೆ ವತಿಯಿಂದ 2019–20/21ನೇ ಸಾಲಿನ ಎಸ್‌ಸಿಎಸ್‌ಪಿ ಯೋಜನೆಯಡಿ ಬಾಕಿ ಉಳಿದ ಮೊತ್ತಕ್ಕೆ ಅರ್ಹ ಫಲಾನುಭವಿಗಳಿಂದ ಪಕ್ಕ ಮನೆ ನಿರ್ಮಾಣಕ್ಕಾಗಿ, ಶೌಚಾಲಯ ನಿರ್ಮಾಣಕ್ಕಾಗಿ ಸಹಾಯಧನ ಪಡೆಯಲು ಮತ್ತು ಪುರಸಭೆಯ ಪೌರಕಾರ್ಮಿಕರಿಗೆ ನಿವೇಶನ ಖರೀದಿಗಾಗಿ ಸಹಾಯಧನ ನೀಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಬೇಕಾದ ದಾಖಲೆ:ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಇತ್ತಿಚೀನ ಭಾವಚಿತ್ರ, ಮನೆ ತೆರಿಗೆ ರಶೀದಿ, ನಮೂನೆ–03, ನಿವೇಶನ ಖರೀದಿ ಸಂಬಂಧಿಸಿದಂತೆ ಅಗ್ರಿಮೆಂಟ್ ಪತ್ರ ಹಾಗೂ ಇತರೆ ದಾಖಲೆ ಸಲ್ಲಿಸಬೇಕು.ಅರ್ಜಿ ಸಲ್ಲಿಸಲು ನ.20 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಕುರೇಕುಪ್ಪ ಪುರಸಭೆ ಕಚೇರಿ ಅಥವಾ ದೂ. 08395–295601 ಗೆ ಸಂಪರ್ಕಿಸಬಹುದು .

ದಾಸ ಸಾಹಿತ್ಯ ಇಂದಿಗೂ ಪ್ರಸ್ತುತ: ಡಾ.ತಿಪ್ಪೇರುದ್ರ

ಬಳ್ಳಾರಿ: ಕನಕದಾಸರ ಕಾವ್ಯ ಹಾಗೂ ತತ್ವಪದಗಳು ಮಾನವಿ ಮೌಲ್ಯಗಳಿಂದ ಇಂದಿಗೂ ಪ್ರಸ್ತುತವಾಗಿವೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಸಾರಾಂಗ (ಪ್ರ) ನಿರ್ದೇಶಕರಾದ ಡಾ. ತಿಪ್ಪೇರುದ್ರ ಹೇಳಿದರು.ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಘಟಕದ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ ಕನಕದಾಸರ ಜಯಂತಿಯನ್ನು ಕನಕದಾಸರ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

12 ಮಿಶ್ರ ತಳಿ ಹಸುಗಳ ಮೂಲಕ ಹಾಲಿನ ಉತ್ಪಾದನೆ । ಉಪ ಕಸುಬಾದ ಕುರಿ, ಕೋಳಿ ಸಾಕಣೆಯಿಂದ ಆದಾಯ

ಹೈನುಗಾರಿಕೆಯಿಂದ ಲಕ್ಷಗಟ್ಟಲೆ ಸಂಪಾದನೆ ಮಾಡಿದ ರೈತನ ಯಶೋಗಾಥೆ

ಮಾಯಕೊಂಡ : ಆಧುನಿಕ ಯುಗದ ಯುವಕರು ನಗರ ಪ್ರದೇಶಕ್ಕೆ ಹೋಗಿ ದುಡಿಯುವ ಹಂಬಲ ಹೊಂದಿದ್ದರೆ, ದಾವಣಗೆರೆ ತಾಲೂಕಿನ ಅನಗೋಡು ಹೋಬಳಿಯ ಕೆಂಚಮ್ಮನಹಳ್ಳಿ ಗ್ರಾಮದ ಕೆ. ಕಾಮಯ್ಯ ಬೆಂಗಳೂರಿನಿಂದ ಬಂದು ಹಸುಗಳನ್ನು ಸಾಕಿ ತಿಂಗಳಿಗೆ ಲಕ್ಷಗಟ್ಟಲೆ ಸಂಪಾದಿ ಸುತ್ತಿದ್ದಾರೆ. ಇವರ ಪರಿಶ್ರಮ, ದೃಢಸಂಕಲ್ಪ ಮತ್ತು ಹೈನುಗಾರಿಕೆ ಇತರರಿಗೆ ಮಾದರಿಯಾಗಿದೆ.

ಇವರು ಮೂಲತಃ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಸಮೀಪದ ಬುಗಡಿಹಳ್ಳಿ ಗ್ರಾಮದವರು. 20 ವರ್ಷಗಳ ಹಿಂದೆ ಕುಟುಂಬ ಸಮೇತರಾಗಿ ದಾವಣಗೆರೆಗೆ ಬಂದು ಮೊದಲು ಹೂವಿನ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿದ್ದರು. 2019ರಲ್ಲಿ ಕೆಂಚಮ್ಮನಹಳ್ಳಿಯಲ್ಲಿ 1 ಎಕರೆ 30ಗುಂಟೆ ಜಮೀನನ್ನು ಖರೀದಿಸಿ ಮನೆ ನಿರ್ಮಿಸಿ ಅಲ್ಲೆ ನೆಲೆಸಿದರು. ಇದೇ ಜಾಗದಲ್ಲಿ ಹಸು, ಕೋಳಿ, ಕುರಿ ಸಾಕಾಣಿಕೆ ಆರಂಭಿಸಿ ಪ್ರಗತಿ ಸಾಧಿಸಿದ್ದಾರೆ.

8. 10 ತಳಿ, 1 ಸಾಮಿವಾಲ ತಳಿ, 1 ಜರ್ಸಿ ತಳಿ ಸೇರಿ ಒಟ್ಟು 12 ಹಸುಗಳಿವೆ. ಇದರ ಜತೆಗೆ 6 ಹೆಣ್ಣು ಕರುಗಳಿವೆ. ಪ್ರಸ್ತುತ 11 ಹಸುಗಳು ಹಾಲು ಕೊಡುತ್ತಿದ್ದು, ಬೆಳಗ್ಗೆ 91 ಲೀ. ಮತ್ತು ಸಂಜೆ 80 ಲೀ. ದಿನಕ್ಕೆ ಸರಾಸರಿ 170 ಲೀ ಹಾಲು ಉತ್ಪಾದನೆಯಾಗುತ್ತಿದೆ.

ಪ್ರತಿ ಲೀಟರ್ ಹಾಲಿಗೆ 34.70 ರೂ. ದರ, ದಿನಕ್ಕೆ 5900 ರೂ. ಆದಾಯ ಮತ್ತು ಸರ್ಕಾರ ಪ್ರತಿ ಲೀಟರ್ ಹಾಲಿಗೆ 5 ರೂ. ಸಹಾಯಧನ ನೀಡುತ್ತಿದ್ದು ಮೂರು ತಿಂಗಳಿಗೊಮ್ಮೆ 50ಸಾವಿರ ಹಣ ಖಾತೆಗೆ ಜಮೆಯಾಗುತ್ತಿದೆ.

ಹಾಲು ಕರೆಯಲು ಮತ್ತು ಹುಲ್ಲು ಕತ್ತರಿಸಲು ಸೇರಿ ಎಲ್ಲ ಆಧುನಿಕ ಉಪಕರಣಗಳನ್ನು ಬಳಸುತ್ತಿದ್ದಾರೆ. ಹಸು ಆರೈಕೆ ಕೊಟ್ಟಿಗೆ ನೆಲದಲ್ಲಿ ಮ್ಯಾಟ್ ಅಳವಡಿಸಿದ್ದಾರೆ. ನಿಯಮಿತ ಸ್ವಚ್ಛತೆ ಮತ್ತು ಆರೋಗ್ಯ ತಪಾಸಣೆ ಮಾಡುತ್ತಿದ್ದಾರೆ.ಅಲ್ಲದೇ ಬೋರ್ವೆಲ್ ರೈತ ಕಾಮಯ್ಯನವರು ನೀರಾವರಿ ಬಳಸಿಕೊಂಡು 840 ಅಡಕೆ ಸಸಿಗಳನ್ನು 4 ವರ್ಷದ ಹಿಂದೆ ನಾಟಿ ಮಾಡಿದ್ದಾರೆ. ಇದರ ಮಿಶ್ರ ಬೆಳೆಯಾಗಿ ಸೇವಂತಿ, ಚೆಂಡು ಹೂ, ಗುಲಾಬಿ, ಹಸುಗಳಿಗೆ ನೇಪಿಯರ್ ಸಪ್ಪೆ ಸೇರಿ ಹಲವಾರು ಬೆಳೆಗಳನ್ನು ಬೆಳೆಯುತ್ತಿದ್ದಾರೆ. ಹೂವಿನ್ನ ಮಾರಾಟದಿಂದ ಉತ್ತಮ ಆದಾಯ ಬರುತ್ತಿದೆ.

ಆದಾಯ–ಖರ್ಚು ಚಿತ್ರಣ

ಹೈನುಗಾರಿಕೆ ಯಿಂದ ತಿಂಗಳಿಗೆ 1,82,900 ರೂ ಆದಾಯ ಬರುತ್ತಿದ್ದು, ಹಸುಗಳಿಗೆ ಶೇಂಗಾ ಹಿಂಡಿ, ಗೋಧಿ ಬೂಸಾ, ಮೆಕ್ಕೆಜೋಳದ ರಸಮೇವು, ಭತ್ತ, ರಾಗಿ, ಒಣ ಹುಲ್ಲು ಸೇರಿ ತಿಂಗಳಿಗೆ ಸರಾಸರಿ 90 ಸಾವಿರ ರೂ. ಖರ್ಚು ಬರುತ್ತಿದೆ. ಹಸುಗಳಿಂದ ಪ್ರತಿ ವರ್ಷ 40 ಲೋಡು ಸಗಣಿ ಗೊಬ್ಬರ ಉತ್ಪಾದನೆ ಯಾಗುತ್ತಿದ್ದು, ಪ್ರತಿ ಲೋಡಿಗೆ 7 ಸಾವಿರ ದರದಲ್ಲಿ ಮಾರಾಟ ಮಾಡಿ 2.8 ಲಕ್ಷ ರೂ. ಗಳಿಸುತ್ತಿದ್ದಾರೆ. 30 ನಾಟಿ ಕೋಳಿ ಮತ್ತು 30 ಕುರಿಗಳನ್ನು ಸಾಕುತ್ತಿದ್ದು ಇವುಗಳ ಮಾರಾಟ ದಿಂದ ಉತ್ತಮ ಆದಾಯ ಪಡೆಯುತ್ತಿದ್ದಾರೆ.

ತರಗತಿಯಲ್ಲೇ ಹೃದಯಾಘಾತವಾಗಿ ಶಿಕ್ಷಕ ಸಾವು

ಹನುಮಸಾಗರ(ಕೊಪ್ಪಳ): ಪಟ್ಟಣದ ಕರ್ನಾಟಕ ಪಬ್ಲಿಕ್ ಸ್ಕೂಲ್ ಬಾಲಕರ ಹಿರಿಯ ಪ್ರಾಥಮಿಕ ಶಾಲೆ ಶಿಕ್ಷಕ ಮಹಿಬೂಬಸಾಬ ಕಸಾಬ (59) ಬುಧವ

ಪೂರ್ಣಗೊಂಡಿರುವ ಕಾಮಗಾರಿಗಳ ಮಾಹಿತಿ ನೀಡಲು ಸೂಚನೆ

ಹಾಸನ : ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ಮೂಲಕ ಪೂರ್ಣಗೊಂಡಿರುವ ಕಾಮಗಾರಿಗಳ ಉದ್ಘಾಟನೆ, ಕಾಮಗಾರಿಗಳ ಶಂಕುಸ್ಥಾಪನೆಗೆ ಹಾಗೂ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಸವಲತ್ತು ವಿತರಣೆಗಾಗಿ ಸಂಪೂರ್ಣ ಮಾಹಿತಿಯನ್ನು ನೀಡುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಅಧಿಕಾರಿಗಳೊಂದಿಗೆಸಭೆ ನಡೆಸಿ ಮಾತನಾಡಿದ ಅವರುಮಾನ್ಯ ಮುಖ್ಯಮಂತ್ರಿಯವರು ಡಿ.06 ರಂದು ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ತಮ್ಮ ತಮ್ಮ ಇಲಾಖೆಯ ಮಾಹಿತಿಗಳನ್ನು ನೀಡುವಂತೆ ನಿರ್ದೇಶನ ನೀಡಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್,ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್ ಕುಮಾರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು,ಭೂ ದಾಖಲೆಗಳ ಇಲಾಖೆಯ ಉಪ ನಿರ್ದೇಶಕರಾದ ಹೇಮಲತಾ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

ಶಿವಮೊಗ್ಗ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಿಲ್ಲೆಯ 07 ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಹುದ್ದೆಗಳನ್ನು ಗೌರವಧನ ಸೇವೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಭದ್ರಾವತಿಯಲ್ಲಿ 19 ಅಂಗನವಾಡಿ ಕಾರ್ಯಕರ್ತೆಯರು ಮತ್ತು 59 ಸಹಾಯಕಿಯರು, ಹೊಸನಗರದಲ್ಲಿ 6 ಅಂಗನವಾಡಿ ಕಾರ್ಯಕರ್ತೆಯರು ಮತ್ತು 144 ಸಹಾಯಕಿಯರು, ಸಾಗರದಲ್ಲಿ 3 ಅಂಗನವಾಡಿ ಕಾರ್ಯಕರ್ತೆಯರು ಮತ್ತು 62 ಸಹಾಯಕಿಯರು, ಶಿಕಾರಿಪುರದಲ್ಲಿ 1 ಅಂಗನವಾಡಿ ಕಾರ್ಯಕರ್ತೆಯರು ಮತ್ತು 23 ಸಹಾಯಕಿಯರು, ಶಿವಮೊಗ್ಗದಲ್ಲಿ 16 ಅಂಗನವಾಡಿ ಕಾರ್ಯಕರ್ತೆಯರು ಮತ್ತು 93 ಸಹಾಯಕಿಯರು, ಸೊರಬದಲ್ಲಿ 3 ಅಂಗನವಾಡಿ ಕಾರ್ಯಕರ್ತೆಯರು ಮತ್ತು 42 ಸಹಾಯಕಿಯರು ತೀರ್ಥಹಳ್ಳಿಯಲ್ಲಿ 11 ಅಂಗನವಾಡಿ ಕಾರ್ಯಕರ್ತೆಯರು ಮತ್ತು 69 ಸಹಾಯಕಿಯರ ಹುದ್ದೆಗಳು ಖಾಲಿ ಇವೆ.

ಅರ್ಜಿ ಸಲ್ಲಿಸಲು ಡಿ.15 ಕೊನೆಯ ದಿನಾಂಕವಾಗಿದ್ದು, ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್ ಛಿಣಣಥಿ://ಇಚಿಡಿಟಿಜಟಚಿಇಚಿಠಟಿಜ.ಇಚಿಡಿ.ಟಿಛಿಟಿ/ಚಿಛಛಿಜ/ ಮೂಲಕ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೇಲಿನ ವೆಬ್‌ಸೈಟ್ ಅಥವಾ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿಗೆ ಸಂಪರ್ಕಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಭಾರತಿ ಬಣಕಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ಹಾಸನ : ವೃತ್ತಿಪರ ಪದವಿಗಳಾದ BE, BE (Lateral entry), B Tec, BDS, MBBS, BBA, BCA, B Sc(AG), B Pharma, MBA, MCA, B Ed, LLB ಇತ್ಯಾದಿ ಕೋರ್ಸುಗಳಲ್ಲಿ 2025-26ನೇ ಸಾಲಿಗಾಗಿ ಪ್ರಸಕ್ತ ವರ್ಷ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ ಪ್ರಧಾನ ಮಂತ್ರಿಗಳ ಶಿಷ್ಯವೇತನಕ್ಕಾಗಿ ಅರ್ಜಿಗಳನ್ನು ವೆಬ್ ಸೈಟ್ https://ksb.gov.in/index.htm ರಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು ಅರ್ಹ ಅಭ್ಯರ್ಥಿಗಳು ಅರ್ಜಿಸಲ್ಲಿಸಿ ದಾಖಲಾತಿಗಳ ನೈಜತೆಯನ್ನು ಉಪ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಂಕರಿಪುರಂ, ಹಾಸನ ಇವರಲ್ಲಿ ಪರಿಶೀಲನೆಗಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿ.31 ಆಗಿರುತ್ತದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಯುವನಿಧಿ ಸ್ವಯಂ ಘೋಷಣೆ ಪ್ರತಿ ತಿಂಗಳು ಕಡ್ಡಾಯ

ದಾವಣಗೆರೆ : ಗ್ಯಾರಂಟಿ ಯೋಜನೆ ಯುವನಿಧಿ ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಹಣ ಸಂದಾಯ ಮಾಡಲಾಗುತ್ತಿದ್ದು, ಫಲಾನುಭವಿಗಳಿಗೆ ನಂತರದ ತಿಂಗಳುಗಳ ಯುವನಿಧಿ ಹಣ ಸಂದಾಯವಾಗಲು ಕಡ್ಡಾಯವಾಗಿ ಪ್ರತಿ ತಿಂಗಳ 25ನೇ ತಾರೀಖಿನೊಳಗೆ ಸ್ವಯಂ ದೃಢೀಕರಣ ಮಾಡಿಕೊಳ್ಳಬೇಕಾಗಿರುತ್ತದೆ.

ಗರ್ಭಿಣಿ ಮಹಿಳೆಯರ ಆರೋಗ್ಯ ತಪಾಸಣೆ ಕಾರ್ಯ ನಿರಂತರವಾಗಿರಲಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು

ಬಳ್ಳಾರಿ: ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಗರ್ಭಿಣಿ ಮಹಿಳೆಯರ ಆರೋಗ್ಯ ತಪಾಸಣೆ ಕೈಗೊಳ್ಳುವ ಕಾರ್ಯ ನಿರಂತರವಾಗಿರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಗುರುವಾರ, ಸಿರುಗುಪ್ಪ ತಾಲ್ಲೂಕಿನ ತೆಕ್ಕಲಕೋಟೆಯ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ಭೇಟಿ ನೀಡಿ ಆಸ್ಪತ್ರೆ ಕಾರ್ಯ ವೈಖರಿ ಕುರಿತು ಮೇಲ್ವಿಚಾರಣೆ ನಡೆಸಿ ಅಲ್ಲಿನ ಪ್ರಸೂತಿ ತಜ್ಞರು ಮತ್ತು ಮಕ್ಕಳ ತಜ್ಞರೊಂದಿಗೆ ಚರ್ಚಿಸಿ ಮಾತನಾಡಿದ ಅವರು, ಗರ್ಭಿಣಿ ಮಹಿಳೆಯರು ಹಾಗು ಮಕ್ಕಳ ಆರೋಗ್ಯ ಸೇವೆಗಳ ನಿರಂತರವಾಗಿರಬೇಕು ಎಂದು ತಿಳಿಸಿದರು.

ಗರ್ಭಿಣಿ ಮಹಿಳೆಯರು ಮತ್ತು ಮಕ್ಕಳ ತಾಯಂದಿರು ಪೌಷ್ಟಿಕ ಆಹಾರ ಸೇವನೆ, ಶಿಶುಗಳ ಆರೈಕೆ, ಎದೆ ಹಾಲುಣಿಸುವಿಕೆ, ಲಸಿಕೆಗಳ ಮಹತ್ವ ಕುರಿತು ಅರಿವು ಹೊಂದಬೇಕು. ಮಕ್ಕಳಲ್ಲಿ ಯಾವುದಾದರೂ ರೋಗಲಕ್ಷಣಗಳು ಕಂಡುಬಂದಲ್ಲಿ ತಕ್ಷಣವೇ ಆಸ್ಪತ್ರೆಗೆ ಕರೆತರಬೇಕು. 5 ವರ್ಷದೊಳಗಿನ ಮಕ್ಕಳ ಉಸಿರಾಟ ತೊಂದರೆ ಕಂಡುಬಂದಲ್ಲಿ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಯ ವೈದ್ಯರ ಬಳಿ ತೆರಳಬೇಕು ಎಂದು ತಿಳಿಸಿದರು.

ಮುಖ್ಯವಾಗಿ ಗಂಡಾಂತರ ಗರ್ಭಿಣಿಯರು ಎಂದು ಗುರ್ತಿಸಿದ ಚೊಚ್ಚಲು ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ-ಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗುವುದು, ಮೊದಲ ಹೆರಿಗೆ ಸಿಸೇರಿಯನ್ ಮುಂತಾದ ಕಾರಣಗಳಿದ್ದರೆ ನಿರ್ಲಕ್ಷಿಸಿಸಬಾರದು. ನಿಯಮಿತವಾಗಿ ತಪಾಸಣೆಗೆ ಒಳಗಾಗಬೇಕು ಎಂದು ಸೂಚಿಸಿದರು.

ತೀವ್ರ ರಕ್ತಹೀನತೆಯಂತಹ ಸನ್ನಿವೇಶದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆಯಾದ ಐಎಫ್‌ಎ ಮಾತ್ರೆ, ಐರನ್ ಸುಕ್ರೋಸ್, ರಕ್ತ ಹಾಕಿಸುವಿಕೆ ಕೈಗೊಳ್ಳಬೇಕು. ಸುಧಾರಣೆಯಾಗದಿದ್ದಲ್ಲಿ ತಜ್ಞರ ಬಳಿ ತಪ್ಪದೇ ತೆರಳಬೇಕು. ಅಗತ್ಯವಿದ್ದಲ್ಲಿ ಸ್ಕ್ಯಾನ್ ಮಾಡಿಸಬೇಕು. ಮೊದಲ ಹೆರಿಗೆ ಶಸ್ತ್ರಚಿಕಿತ್ಸೆಯಾದಲ್ಲಿ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕನಿಷ್ಠ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡಬೇಕು. ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ-ಟಿ, ನೀರೊಧ್ ಬಳಸಬೇಕು ಎಂದರು.

ರಕ್ತಹೀನತೆ ತಡೆಗಟ್ಟಲು ಎಲ್ಲಾ ಗರ್ಭಿಣಿ ತಾಯಂದಿರು ಕಬ್ಬಿಣಾಂಶ ಮಾತ್ರೆ ಜೊತೆಗೆ ಪೌಷ್ಟಿಕ ಆಹಾರ ಸೇವನೆ ಮಾಡಬೇಕು. 6 ತಿಂಗಳ ನಂತರ ಮಕ್ಕಳ ಪೂರಕ ಪೌಷ್ಟಿಕ ಆಹಾರ ನೀಡಬೇಕು ಎಂದು ಮಹಿಳೆಯರಿಗೆ ತಿಳಿಸಿದರು.

ಮುಖ್ಯವಾಗಿ ತೊಡಕಿನ ಗರ್ಭಿಣಿಯರ ಬಗ್ಗೆ ಕಾಳಜಿ ಇರಲಿ, ನಿಯಮಿತ ಆರೋಗ್ಯ ತಪಾಸಣೆ ಹಾಗು ಉತ್ತಮ ಹೆರಿಗೆ ಆಗುವಂತೆ ನೋಡಿಕೊಳ್ಳಬೇಕು. ತೊಡಕಿನ ಗರ್ಭಿಣಿಯರನ್ನು ಮುಂಚೂಣಿಯಾಗಿ ಮಾಹಿತಿ ನೀಡಿ ಹೆರಿಗೆಗಾಗಿ ಜಿಲ್ಲಾ ಆಸ್ಪತ್ರೆಗೆ ಶಿಫಾರಸ್ಸು ಮಾಡಬೇಕು ಎಂದು ವೈದ್ಯರಿಗೆ ಸೂಕ್ತ ಸಲಹೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಆಡಳಿತ ವೈದ್ಯಾಧಿಕಾರಿ ಟಿ.ರಾಮಕೃಷ್ಣ, ಪ್ರಸೂತಿ ತಜ್ಞರಾದ ಡಾ.ಶಾರದ, ಡಾ.ಅರುಣ್ ಕುಮಾರ್, ಪ್ರಭಾರಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮಹಮ್ಮದ್ ಖಾಸೀಂ ಸೇರಿದಂತೆ ಆಶಾ ಕಾರ್ಯಕರ್ತೆಯರು, ತಾಯಂದಿರು ಉಪಸ್ಥಿತರಿದ್ದರು.

ಇತಿಹಾಸ ಅಕಾಡೆಮಿ ರಾಷ್ಟ್ರೀಯ ಸಮ್ಮೇಳನ ಯಶಸ್ವಿ ಸಮಾರೋಪ

ಯುವ ಸಂಶೋಧಕರಿಗೆ ಮಾರ್ಗದರ್ಶಿ ದೀಪ

ಗದಗ : ಕಳೆದ 39 ವರ್ಷಗಳಿಂದ ನಿರಂತರವಾಗಿ ಕರ್ನಾಟಕ ಇತಿಹಾಸ ಸಂಶೋಧಕರ ಸಮ್ಮೇಳನಗಳು, ಐತಿಹಾಸಿಕ ಪರಂಪರೆ ಉಳಿಸಿ ಕಾರ್ಯಕ್ರಮಗಳು ಮತ್ತು ಇತಿಹಾಸ ದರ್ಶನದಂತಹ ಮಹತ್ವದ ಸಂಪುಟಗಳ ಪ್ರಕಟಣೆಯ ಮೂಲಕ ಕರ್ನಾಟಕ ಇತಿಹಾಸ ಅಕಾಡೆಮಿಯು ಯುವ ಇತಿಹಾಸ ಸಂಶೋಧಕರಿಗೆ ಮಾರ್ಗದರ್ಶಿ ದೀಪವಾಗಿದೆ ಎಂದು ಹಿರಿಯ ಇತಿಹಾಸ ಸಂಶೋಧಕರಾದ ಡಾ. ಲಕ್ಷ್ಣ ತೆಲಗಾವಿ ಹೇಳಿದರು.

ಅವರು ಗದುಗಿನ ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ಇತಿಹಾಸ ಅಕಾಡೆಮಿ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಹಾಗೂ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ಇವುಗಳ ಆಶ್ರಯದಲ್ಲಿ ಇತಿಹಾಸ ಅಕಾಡೆಮಿಯ ರಾಷ್ಟ್ರೀಯ ವಾರ್ಷಿಕ ಸಮ್ಮೇಳನದಲ್ಲಿ ಜರುಗಿದ ಸಮಾರೋಪ ಸಮಾರಂಭದಲ್ಲಿ ಸಮಾರೋಪ ನುಡಿಗಳನ್ನಾಡಿದರು.

ಕರ್ನಾಟಕ ಇತಿಹಾಸ ಅಕಾಡೆಮಿಯು ಹಿರಿಯ ಇತಿಹಾಸ ತಜ್ಞರಾದ ಡಾ. ಸೂರ್ಯನಾಥ ಕಾಮತರಿಂದ ಸ್ಥಾಪನೆಗೊಂಡು ವಿವಿಧ ಇತಿಹಾಸ ಸಂಶೋಧಕರಿಗೆ ವೇದಿಕೆಯಾಗಿ ಇದೀಗ ಡಾ. ದೇವರಕೊಂಡರೆಡ್ಡಿಯವರ ನೇತೃತ್ವದಲ್ಲಿ ಯಶಸ್ವಿಯಾಗಿ ಮುನ್ನಡೆಯುತ್ತಿದೆ. ಎಲ್ಲ 'ಇಸಂ' ಗಳಿಂದ ದೂರವಾಗಿ ವಸ್ತುನಿಷ್ಠ ಇತಿಹಾಸಕ್ಕೆ ಪೂರಕವಾಗಿ ಆಕರಗಳನ್ನು

ಸೃಷ್ಟಿಸುವ ಮಹತ್ವಪೂರ್ಣ ಸಂಘಟನೆಯಾಗಿದೆ. ಇದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಯುವ ಸಂಶೋಧಕರ ಮೇಲಿದೆ ಎಂದು ಹೇಳಿದರು.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಪರಮಶಿವಮೂರ್ತಿ ಮಾತನಾಡಿ ಇತಿಹಾಸ ಅಕಾಡೆಮಿಯು ಪ್ರತಿವರ್ಷ ನೂರಾರು ಹೊಸ ಶಾಸನಗಳ ಸಂಶೋಧನೆ, ದೇವಾಲಯ, ಮೂರ್ತಿ ಶಿಲ್ಪಗಳ ವಿಶ್ಲೇಷಣೆ, ಪ್ರಾಚ್ಯವಸ್ತು ಸಂರಕ್ಷಣೆಯ ಮಹತ್ತರ ಕಾರ್ಯವನ್ನು ಮಾಡುತ್ತಾ ಬಂದಿದ್ದು, ಹೆಚ್ಚು ಹೆಚ್ಚು ಜನರು ಇದರ ಸದಸ್ಯರಾಗುವುದರ ಮೂಲಕ ನಮ್ಮ ನಾಡಿನ ಇತಿಹಾಸ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ಹೇಳಿದರು.

ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರು ಲಕ್ಕುಂಡಿ ಉತ್ಖನಕ್ಕೆ ಚಾಲನೆ ನೀಡಿದ್ದಾರೆ. ಕಳೆದ ವರ್ಷ ಲಕ್ಕುಂಡಿ ಪರಿಸರದ ಪ್ರಾಚ್ಯ ವಸ್ತುಗಳ ಅನ್ವೇಷಣಾ ಹಾಗೂ ಸಂರಕ್ಷಣಾ ಕಾರ್ಯವನ್ನು ಕೈಗೊಂಡಿದ್ದು ನಾಲ್ಕು ಏಕರೆ ಬಯಲು ಜಾಗೆಯಲ್ಲಿ ವಿಶಿಷ್ಟ ವಸ್ತು ಸಂಗ್ರಹಾಲಯವನ್ನು ನಿರ್ಮಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಲಕ್ಕುಂಡಿ ಪರಿಸರ ಅಭಿವೃದ್ಧಿಗೆ ಇತಿಹಾಸ ಸಂಶೋಧಕರು ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಬೇಕೆಂದು ಹೇಳಿದರು. ಕರ್ನಾಟಕ ಇತಿಹಾಸ ಅಕಾಡೆಮಿಯ ಅಧ್ಯಕ್ಷರಾದ ಡಾ. ದೇವರಕೊಂಡಾರೆಡ್ಡಿ ಸಮ್ಮೇಳನ ಆಯೋಜನೆಗೆ ಸಹಕರಿಸಿದ ಸರ್ವರಿಗೂ ಕೃತಜ್ಞತೆ ಸಲ್ಲಿಸಿದರು.

ಸಮಾರಂಭದಲ್ಲಿ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಸಹಾಯಕ ನಿರ್ದೇಶಕರಾದ ಡಾ. ಅಬ್ದುಲ್ ಅಜೀಜ್ ಮುಲ್ಲಾ ಸರ್ವರನ್ನು ಸ್ವಾಗತಿಸಿದರು. ಪ್ರೊ. ಶಕುಂತಲಾ ಸಿಂಧೂರ ನಿರೂಪಿಸಿದರು. ಅಕಾಡೆಮಿಯ ಪ್ರಧಾನ ಕಾರ್ಯದರ್ಶಿ ಡಾ. ಕೆ. ಎಲ್. ರಾಜಶೇಖರ ವಂದಿಸಿದರು. ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ ಇತಿಹಾಸ ಸಂಶೋಧಕರು, ಉಪನ್ಯಾಸಕರು ಪಾಲ್ಗೊಂಡಿದ್ದರು.

ಜಾವಲಿನ್ ಸ್ಪರ್ಧೆಯಲ್ಲಿ ದಾಖಲೆಯೊಂದಿಗೆ ಸರ್ಕಾರಿ ವಿಜ್ಞಾನ ಕಾಲೇಜಿನ ವಿದ್ಯಾರ್ಥಿ ಮನೋಜ್ ಕೆ ಪ್ರಥಮ

ಚಿತ್ರದುರ್ಗ: ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ನಡೆದ ಅಂತರ್ ಕಾಲೇಜು ಸ್ಪರ್ಧೆಯ ಜಾವಲಿನ್ ಸ್ಪರ್ಧೆಯಲ್ಲಿ 48.43. ಮೀ. ದೂರ ಎಸೆದು, ಸರ್ಕಾರಿ ವಿಜ್ಞಾನ ಕಾಲೇಜಿನ ಪ್ರಥಮ ಬಿ. ಎಸ್ ಸಿ. ವಿದ್ಯಾರ್ಥಿ ಮನೋಜ್. ಕೆ. ವಿಶ್ವವಿದ್ಯಾಲಯದ ದಾಖಲೆಂದಿಗೆ ಪ್ರಥಮ ಸ್ಥಾನ ಪಡೆದು, ವಿಶ್ವವಿದ್ಯಾಲಯಕ್ಕೆ ಮತ್ತು ಸರ್ಕಾರಿ ವಿಜ್ಞಾನ ಕಾಲೇಜಿಗೆ ಹೆಸರು ತಂದುಕೊಟ್ಟಿದ್ದಾರೆ ಎಂದು ಸರ್ಕಾರಿ ವಿಜ್ಞಾನ ಕಾಲೇಜಿನ ದೈಹಿಕ ನಿರ್ದೇಶಕರಾದ ಡಾ ರಾಘವೇಂದ್ರ ಕೆ. ರವರು ಪತ್ರಿಕಾ ಪ್ರಕಟಣೆ ಮುಖಾಂತರ ತಿಳಿಸಿದ್ದಾರೆ.

ಗ್ರಾಮೀಣ ವಿದ್ಯಾರ್ಥಿಗಳು ಹೆಚ್ಚಿನ ಮಟ್ಟದಲ್ಲಿ ಕ್ರೀಡೆಯಲ್ಲಿ ಭಾಗವಹಿಸಿ, ಅತ್ಯುತ್ತಮ ಸಾಧನೆಗೈದು ಉದ್ಯೋಗ ಪಡೆದುಕೊಳ್ಳಲು ಸಹ ಸಹಕಾರಿಯಾಗಿದೆ, ವಿದ್ಯಾರ್ಥಿಗಳಿಗೆ ಕ್ರೀಡೆಗಳಲ್ಲೂ ಸಹ ಉನ್ನತ ವ್ಯಾಸಂಗಕ್ಕೆ ಉದ್ಯೋಗಗಳಿಗೆ ಅನುಕೂಲಗಳಿವೆ ಎಂಬುದನ್ನು ನೆನಪಿನಲ್ಲಿಟ್ಟುಕೊಂಡು ಉತ್ತಮ ಸಾಧನೆ ಮಾಡಬೇಕೆಂದು ವಿನಂತಿಸಿಕೊಂಡಿದ್ದಾರೆ.

ಕಾಲೇಜಿನ ಪ್ರಾಂಶುಪಾಲರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು, ಮನೋಜ್ ಕೆ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ನಗರಸಭೆಯ ನೌಕರರ ಸಂಕಷ್ಟಗಳು ಮತ್ತು ಪರಿಹಾರ

ಕಸವನ್ನ ಡಬ್ಬಿಗಳಲ್ಲಿ ಸಂಗ್ರಹಿಸುವುದೇ ಉತ್ತಮ

ಚಿತ್ರದುರ್ಗ: ದಿನನಿತ್ಯ ಕಸ ಸಂಗ್ರಹಿಸುವ ವಾಹನಗಳು ಮನೆ ಮುಂದೆ ಬಂದರೂ ಸಹ ಕೆಲವೊಂದು ರಸ್ತೆಗಳಲ್ಲಿ, ಗಲ್ಲಿಗಳಲ್ಲಿ, ಜನರು ಕಸ ಹಾಕದೆ, ಬೇರೆ ಸಮಯದಲ್ಲಿ, ಹೊತ್ತು ಗೊತ್ತಿಲ್ಲದ ಸಮಯದಲ್ಲಿ, ರಾತ್ರಿ ಸಮಯದಲ್ಲಿ ಎಲ್ಲೆಂದರಲ್ಲಿ ಕಸ ಚೆಲ್ಲುತ್ತಿದ್ದು, ಅದನ್ನು ಸಂಗ್ರಹಿಸುವ ನಿಟ್ಟಿನಲ್ಲಿ ನಗರಸಭೆಯ ನೌಕರರು ಕಾರ್ಮಿಕರು ಹಗಲಿರುಳು ಶ್ರಮಪಟ್ಟು, ಕಸ ಸಂಗ್ರಹಿಸಿ ವಿಲೇವಾರಿ ಮಾಡುತ್ತಿರುವುದರಿಂದ, ಮಾನವ ಶಕ್ತಿಯ ವ್ಯಯವಾಗುತ್ತಿದೆ, ಈಗಿರುವ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ, ನಗರಸಭೆಯ ನೌಕರರಿಗೆ ಸರಳವಾಗಿ, ಸುಲಭವಾಗಿ ಕಸ ಎತ್ತಿ ಲಾರಿಗಳಲ್ಲಿ ಸಾಗಿಸುವಂತಹ ವ್ಯವಸ್ಥೆ ತರಲು ಮತ್ತೆ ಡಬ್ಬಿಗಳನ್ನ ಕೆಲವು ಭಾಗಗಳಲ್ಲಿ ಇಟ್ಟು, ಜನರಿಗೆ ತರಬೇತಿ ನೀಡುವುದು ಅವಶ್ಯಕವಾಗಿದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ

ಡಾ.ಎಚ್.ಕೆ. ಎಸ್ ಸ್ವಾಮಿ ಅವರು ಜಿಲ್ಲಾಡಳಿತ ಮತ್ತು ನಗರಸಭೆಯನ್ನು ವಿನಂತಿಸಿಕೊಂಡಿದ್ದಾರೆ.

ಅವರು ಚಿತ್ರದುರ್ಗ ನಗರದ ಮೆದೆಹಳ್ಳಿ ರಸ್ತೆಯಲ್ಲಿ ನಗರಸಭೆಯ ನೌಕರರು ಕಷ್ಟಪಟ್ಟು, ಬಿಸಿಲಲ್ಲಿ ಹರಸಾಹಸ ಪಟ್ಟು, ಚದುರಿ ಹೋದ ಕಸವನ್ನ ಗುಡಿಸಿ ಗುಡ್ಡೆ ಮಾಡಿ, ಲಾರಿ ಹಾಕುವ ಸಂದರ್ಭದಲ್ಲಿ ಶ್ರಮದ ಉಳಿತಾಯದ ಬಗ್ಗೆ ಜಾಗೃತಿ ಮೂಡಿಸುತ್ತ ಮಾತನಾಡುತ್ತಿದ್ದರು.ಬೆಳಗ್ಗೆ ಕಸದ ಗಾಡಿ ಬಂದಾಗ ಕಸ ಹಾಕಲು ಎಲ್ಲರಿಗೂ ಸಹ ಅವಕಾಶಗಳು ಕಡಿಮೆ ಇದ್ದು, ಕೆಲವರು ಒಂಟಿಯಾಗಿ ವಾಸವಿದ್ದಂತವರು ವಯಸ್ಸಾದಂತವರು ಬ

ಸೋಮೇಶ್ವರ ಚದುರಂಗಸಿರಿ ಪ್ರಶಸ್ತಿ

ದಾವಣಗೆರೆ: ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆ ಅಂಗವಾಗಿ ನಗರದ ಶ್ರೀ ಸೋಮೇಶ್ವರ ವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಅಂತರ್ಶಾಲಾ ಚದುರಂಗ ಸ್ಪರ್ಧೆಯಲ್ಲಿ ವೈಭವ್ ಕೆ. ಗೌಡ ಮತ್ತು ಎನ್. ಸಾತ್ವಿಕ್ ನಾಯಕ್ ಅವರಿಗೆ ಸೋಮೇಶ್ವರ ಚದುರಂಗಸಿರಿ ಪ್ರಶಸ್ತಿಗೆ ಭಾಜನರಾದರು.

ಹಿರಿಯರ ವಿಭಾಗದಲ್ಲಿ ಎಸ್.ಜಿ. ನಿಶ್ಚಲ್ ದ್ವಿತೀಯ, ಎಲ್. ಸುಜಯ್ ತೃತೀಯ್ಕಿರಿಯರ ವಿಭಾಗದಲ್ಲಿ ಎ.ಎಸ್. ಮಣಿಕಂಠ, ತೃತೀಯ ಕೆ. ಖುಷಿ ವಿಜೇತರಾದರು.

ಕಾರ್ಯಕ್ರಮದಲ್ಲಿ ತೀರ್ಥಾಚಾರ್ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು, ಅಧ್ಯಕ್ಷತೆಯನ್ನು ಶಾಲೆಯ ಶೈಕ್ಷಣಿಕ ನಿರ್ದೇಶಕ ಎನ್.ಪಿ ಪರಮೇಶ್ವರಪ್ಪ ವಹಿಸಿದ್ದರು ಹಾಗೂ ಶಾಲೆಯ ಆಡಳಿತಾಧಿಕಾರಿ ಎನ್. ಆರ್. ಹರೀಶ್ ಬಾಬು, ಮುಖ್ಯಶಿಕ್ಷಕ ಎಂ. ಆರ್. ಪ್ರಕಾಶ್ ಮತ್ತು ಸ್ಪರ್ಧೆಯ ತೀರ್ಪುಗಾರರಾದ ಸೋಮಶೇಖರ್ ಬಿರಾದರ್ ಉಪಸ್ಥಿತರಿದ್ದರು. ಇದೆ ಸಂದರ್ಭದಲ್ಲಿ ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ಹಾಗೂ ಚನ್ನಗಿರಿ ಬಿಜೆಪಿ ಮುಖಂಡ ಮಾಡಾಳು ಮಲ್ಲಿಕಾರ್ಜುನ್ ಹಾಗೂ ಸಂಸ್ಥೆಯ ಕಾರ್ಯದರ್ಶಿ ಕೆ.ಎಂ ಸುರೇಶ್ ಮಕ್ಕಳಿಗೆ ಶುಭಕೋರಿದರು.

ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನವಾಗಿ ಶ್ರೀ ಸೋಮೇಶ್ವರ ಚದುರಂಗಸಿರಿ ಪ್ರಶಸ್ತಿ ಫಲಕ ಮತ್ತು 5,000 ನಗದು ಹಾಗೂ ದ್ವಿತೀಯ ಬಹುಮಾನವಾಗಿ 3,000 ನಗದು ಮತ್ತು ಪ್ರಶಸ್ತಿ ಫಲಕ ಹಾಗೂ ತೃತೀಯ ಬಹುಮಾನವಾಗಿ ಪ್ರಶಸ್ತಿ ಫಲಕವನ್ನು ಸೋಮೇಶ್ವರೋತ್ಸವ ಸಂದರ್ಭದಲ್ಲಿ ನೀಡಿ ಗೌರವಿಸಲಾಗುವುದು ಎಂದು ಸಂಸ್ಥೆಯ ಕಾರ್ಯದರ್ಶಿ ಕೆ.ಎಂ ಸುರೇಶ್ ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಏಕತಾ ಪಾದಯಾತ್ರೆ

ಗದಗ: ನಮ್ಮ ದೇಶದ ಐಕ್ಯತೆ ಹಾಗೂ ಏಕೀಕರಣಕ್ಕೆ ಹೋರಾಟ ಮಾಡಿದ ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಬಾಯಿ ಪಟೇಲ ಅವರು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಗದಗ ನಗರದ ವಿಠಲಾರೂಢ ಕಲ್ಯಾಣ ಮಂಟಪದಲ್ಲಿ ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಕೋಶ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಏಕತಾ ಪಾದಯಾತ್ರಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

1947ರ ಸ್ವಾತಂತ್ರಾ ನಂತರ ದೇಶಾದಲ್ಲಿ ಹರಿದು ಹಂಚಿ ಹೋಗಿದ್ದ 500ಕ್ಕೂ ಹೆಚ್ಚು ಸಂಸ್ಥಾನಗಳನ್ನು ಒಂದೇ ಒಕ್ಕೂಟದ ವ್ಯವಸ್ಥೆಗೆ ತರಲು ಶ್ರಮಿಸಿದರು. ಅವರ ನಿರಂತರ ಶ್ರಮದ ಫಲವಾಗಿ ದೇಶವು ಒಕ್ಕೂಟ ವ್ಯವಸ್ಥೆಯಡಿ ಬರಲು ಸಾಧ್ಯವಾಯಿತು ಎಂದು ಹೇಳಿದರು.

ದೇಶಾದ್ಯಂತ 3,000ಕ್ಕೂ ಹೆಚ್ಚು ಜಾತಿಗಳು, 25 ಸಾವಿರಕ್ಕೂ ಹೆಚ್ಚು ಉಪಜಾತಿಗಳಿದ್ದರೂ ಎಲ್ಲರಲ್ಲಿಯೂ ಒಗ್ಗಟ್ಟಿನ ಮನೋಭಾವನೆ ಬೆಳೆಸಬೇಕು, ಅದಕ್ಕೆ ಉತ್ತೇಜನ ಕೊಡಬೇಕು ಎಂಬ ನಿಟ್ಟಿನಲ್ಲಿ ಶ್ರಮಿಸಿದ ವಲ್ಲಭಬಾಯಿ ಪಟೇಲ ಅವರಿಗೆ ಮಹಾತ್ಮ ಗಾಂಧೀಜಿ ಅವರು ಸರ್ದಾರ್ ಎಂದು ಬಿರುದನ್ನು ನೀಡಿದರು ಎಂದು ಸ್ಮರಿಸಿದರು.

ಯುವಕರಲ್ಲಿ ದೇಶಪ್ರೇಮ, ದೇಶಭಕ್ತಿ ಹೆಚ್ಚಿಸಬೇಕು, ಸ್ವಾವಲಂಬನೆ ಮನೋಭಾವನೆ ಜೊತೆಗೆ ಸಾಮಾಜಿಕ ಜವಾಬ್ದಾರಿಯ ತಿಳಿವಳಿಕೆ ನೀಡಲು ಪ್ರಧಾನಿ ನರೇಂದ್ರ ಮೋದಿ ಅವರು ಸರ್ದಾರ್ ವಲ್ಲಭಬಾಯಿ ಪಟೇಲ ಅವರ 150ನೇ ಜನ್ಮದಿನದ ಅಂಗವಾಗಿ ದೇಶಾದ್ಯಂತ ಒಂದೇ ಭಾರತ, ಆತ್ಮನಿರ್ಭರ ಭಾರತ ಏಕತಾ ನಡಿಗೆಯನ್ನು ಹಮ್ಮಿಕೊಂಡಿದ್ದಾರೆ ಎಂದು ಹೇಳಿದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಸರ್ದಾರ್ ವಲ್ಲಭಬಾಯಿ ಪಟೇಲರು ಇಂಗ್ಲೆಂಡ್ ಹೋಗಿ ಕಾನೂನು ಪದವಿ ಪಡೆದು, ಐಷಾರಾಮಿ ಜೀವನ ನಡೆಸಬಹುದಿತ್ತು. ಆದರೆ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟಕ್ಕೆ ಧುಮುಕಿದರು. ರೈತರ ಹೋರಾಟದ ನೇತೃತ್ವ ವಹಿಸಿ ಯಶಸ್ಸು ಕಂಡ ವಲ್ಲಭಾಯಿ ಪಟೇಲ ಅವರು ಉಕ್ಕಿನ ಮನುಷ್ಯ ಎಂದೇ ಪ್ರಸಿದ್ಧಿ ಹೊಂದಿದರು ಎಂದು ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಏಕತಾ ನಡಿಗೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಡಿವೈಎಸ್ಪಿ ಮುರ್ತುಜಾ ಖಾದ್ರಿ, ಮೈ ಭಾರತ ಕೇಂದ್ರದ ಉಪನಿರ್ದೇಶಕ ಲೋಕೇಶಕುಮಾರ, ರಾಷ್ಟ್ರೀಯ ಸೇವಾ ಯೋಜನೆಯ ನೋಡಲ್ ಅಧಿಕಾರಿಗಳಾದ ವಿ.ಎಚ್. ಕೊಳ್ಳಿ, ಶ್ರೀನಿವಾಸ ಬಡಿಗೇರ, ರಾಜು ಕುರಡಗಿ, ಅಭಿಯಾನದ ಜಿಲ್ಲಾ ಸಂಚಾಲಕರಾದ ಆರ್.ಕೆ. ಚವ್ಹಾಣ, ಸಂತೋಷ ಅಕ್ಕಿ, ಲಿಂಗರಾಜ ಪಾಟೀಲ, ಪಕೀರೇಶ ರಟ್ಟಿಹಳ್ಳಿ, ರಮೇಶ ಸಜ್ಜಗಾರ, ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ, ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ ಸೇರಿ ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಕಿಶೋರ ಕಾರ್ಮಿಕರು ಪತ್ತೆ

ದಾವಣಗೆರೆ: ನವಂಬರ್ 21 ರಂದು ಹೊನ್ನಾಳಿಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಹಾಗೂ ಬಾಲ್ಯಾವಸ್ಥೆ & ಕಿಶೋರಾವಸ್ಥೆ ತಿದ್ದುಪಡಿಕಾಯ್ದೆ ಕುರಿತು ವಿವಿಧ ಇಲಾಖೆಯ ಅಧಿಕಾರಿಗಳು ಶುಕ್ರವಾರ ಅನಿರೀಕ್ಷಿತವಾಗಿ ವಿವಿಧ ಉದ್ದಿಮೆಗಳಿಗೆ ಭೇಟಿ ನೀಡಿ ಬಾಲ ಹಾಗೂ ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆ ನಡೆಸಲಾಯಿತು.

ತಪಾಸಣೆಯಲ್ಲಿ ಅಪಾಯಕಾರಿ ಉದ್ದಿಮೆಯಲ್ಲಿ ಕೆಲಸ ಮಾಡುವ ಇಬ್ಬರು ಕಿಶೋರ ಕಾರ್ಮಿಕರು ಪತ್ತೆಯಾಗಿದ್ದು.ಪತ್ತೆಯಾದ ಕಿಶೋರ ಕಾರ್ಮಿಕರನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳ ಕಲ್ಯಾಣ ಸಮಿತಿ ವಶಕ್ಕೆ ಒಪ್ಪಿಸಲಾಯಿತು. ಹಾಗೂ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಕಾರ್ಯಾಚರಣೆಯಲ್ಲಿ ಹೊನ್ನಾಳಿ ಕಾರ್ಮಿಕ ನಿರೀಕ್ಷಕರು, ಮಕ್ಕಳ ರಕ್ಷಣಾ ಘಟಕ ಸಿಬ್ಬಂದಿ, ಮಕ್ಕಳ ಸಹಾಯವಾಣಿ ಸಿಬ್ಬಂದಿ, ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳು, ಯೋಜನಾ ನಿರ್ದೇಶಕರು ಹಾಜರಿದ್ದರು.

ಬೀದಿನಾಯಿಗಳ ಉಪಟಳ ತಡೆಯಲು ಕ್ರಮ

ದಾವಣಗೆರೆ: ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರು ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಪಾಲಿಕೆಗೆ ಲಿಖಿತವಾಗಿ ವಿವರಗಳೊಂದಿಗೆ ನವಂಬರ್ 21 ರೊಳಗೆ ತಿಳಿಸಬೇಕು.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸಬೇಕು. ಪಾಲಿಕೆ ವತಿಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಕ್ಕೆ ಸಹಕರಿಸಲು ಹಾಗು ಅವುಗಳ ಪ್ರವೇಶ ನಿಬರ್ಂಧಿಸುವುದನ್ನು ಮತ್ತು ತಮ್ಮ ಸಂಸ್ಥೆಯ ಆವರಣದ ಸ್ವಚ್ಛತೆ ಕಾಪಾಡಲು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಿ. ನೋಡಲ್ ಅಧಿಕಾರಿಯ ವಿವರಗಳನ್ನು ತಮ್ಮ –ಸಂಸ್ಥೆಯ ಪ್ರವೇಶ ದ್ವಾರದಲ್ಲಿ ಪ್ರದರ್ಶಿಸಬೇಕು. ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನ: ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಆದೇಶ ಉಲ್ಲಂಘನೆ ಮಾಡಿದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

ವಸತಿ ಯೋಜನೆಗಳಿಗೆ ಅರ್ಜಿ ಆಹ್ವಾನ

ದಾವಣಗೆರೆ: ಜಿಲ್ಲೆಯ ಮೀನುಗಾರಿಕೆ ಇಲಾಖೆಯಿಂದ ಪ್ರಸಕ್ತ ಸಾಲಿನ ವಸತಿ ರಹಿತ ಮೀನುಗಾರರಿಗೆ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಕಚೇರಿ ವೇಳೆಯಲ್ಲಿ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು, ದಾವಣಗೆರೆ, ಚನ್ನಗಿರಿ, ಹೊನ್ನಾಳಿ ಕಚೇರಿಗಳಲ್ಲಿ ಪಡೆಯಬಹುದು. ಅರ್ಜಿಯನ್ನು ಸಲ್ಲಿಸಲು ಡಿಸೆಂಬರ್ 5 ಕೊನೆಯ ದಿನವಾಗಿರುತ್ತದೆ.

ಸುರಹೊನ್ನೆಯಲ್ಲಿ ಸಹಕಾರ ಸಪ್ತಾಹ ಸಮಾರೋಪ

ದಾವಣಗೆರೆ: ಇದೇ ನ.14 ರಿಂದ ಜಿಲ್ಲಾದ್ಯಂತ ಹಮ್ಮಿಕೊಂಡಿದ್ದ ಅಖಿಲ ಭಾರತ 72 ನೇ ಸಹಕಾರ ಸಪ್ತಾಹ ಸಮಾರೋಪ ಸಮಾರಂಭ ನ್ಯಾಮತಿ ತಾಲ್ಲೂಕಿನ ಸುರಹೊನ್ನೆಯಲ್ಲಿ ಅದ್ದೂರಿಯಾಗಿ ನೆರವೇರಿತು.

ಕಾರ್ಯಕ್ರಮ ಉದ್ಘಾಟಿಸಿದ ಶಿವಮೊಗ್ಗ ಹಾಲು ಒಕ್ಕೂಟದ ನಿರ್ದೇಶಕ ಹನುಮನಹಳ್ಳಿ ಬಿ.ಜಿ ಬಸವರಾಜಪ್ಪ ಮಾತನಾಡಿ, ರೈತರ, ಜನಸಾಮಾನ್ಯರ ಆರ್ಥಿಕ ಸ್ಥಿತಿ ಅಭಿವೃದ್ಧಿಯಲ್ಲಿ ಸಹಕಾರಕ್ಷೇತ್ರ ಮಹತ್ತರ ಪಾತ್ರ ವಹಿಸಿದೆ. ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಸಹಕಾರ ಕ್ಷೇತ್ರವು ಎಲ್ಲ ಕಡೆಯಲ್ಲಿ ಪಸರಿಸಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ನಬಾರ್ಡ್ ಪ್ರತಿನಿಧಿ ಶ್ರೀಮತಿ ರಶ್ಮಿರೇಖಾ, "ಕೇಂದ್ರ ಸರ್ಕಾರವು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಸ್ವಯತ್ತ ಸಂಸ್ಥೆಗಳನ್ನಾಗಿ ಮಾಡುವ ಸದುದ್ದೇಶದಿಂದ ವಿವಿದೋದ್ದೇಶ ಸಹಕಾರ ಸಂಘಗಳನ್ನಾಗಿ ಪರಿವರ್ತಿಸಿದೆ. ಸದರಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖಾಂತರ ರೈತರಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಹಲವಾರು ಸೌಲಭ್ಯಗಳನ್ನು ನೇರವಾಗಿ ತಲುಪುವಂತೆ ಗಣಕೀಕರಣಗೊಳಿಸಲಾಗಿರುತ್ತದೆ ಎಂದರು.

ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕ ಕೆ.ಹೆಚ್ ಷಣ್ಮುಖಪ್ಪ ಮಾತನಾಡಿ, "ಸಹಕಾರಿ ಕ್ಷೇತ್ರದ ಮೂಲಕ ಮಾತ್ರ ಸಂಪೂರ್ಣ ಪ್ರಯೋಜನ ರೈತ ಸಮುದಾಯಕ್ಕೆ ಲಭ್ಯವಾಗಲು ಸಾಧ್ಯ. ಇಂದಿನ ಸ್ಪರ್ಧಾತ್ಮಕ ದಿನಗಳಲ್ಲಿ ಯಾವುದೇ ವಲಯವಾದರೂ ಯಶಸ್ಸನ್ನು ಕಾಣಬೇಕಾದರೆ ಸಹಭಾಗಿತ್ವ ಅತ್ಯಗತ್ಯವಾಗಿದೆ. ಸಹಕಾರಿ ಕ್ಷೇತ್ರ ಕೇವಲ ಕೃಷಿಗೆ ಮಾತ್ರ ಸೀಮಿತವಾಗದೇ ಎಲ್ಲಾ ಕ್ಷೇತ್ರಗಳಲ್ಲೂ ತನ್ನಛಾಪನ್ನು ಮೂಡಿಸಿದೆ ಎಂದರು.

ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಸಿರಿಗೆರೆ ರಾಜಣ್ಣ ಮಾತನಾಡಿ, ಸಹಕಾರ ಸಂಘಗಳ ಆಡಳಿತ ಮಂಡಲಿ ಮತ್ತು ನೌಕರರು ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಬೇಕು. ರೈತರು ಸಕಾಲದಲ್ಲಿ ಸಾಲ ಮರುಪಾವತಿ ಮಾಡಿದರೆ ಸಹಕಾರ ಸಂಘಗಳ ಅಭಿವೃದ್ಧಿ ಸಾಧ್ಯವಾಗುತ್ತದೆ, 7 ದಿನಗಳ ಕಾಲ ಜಿಲ್ಲಾದ್ಯಂತ 72 ನೇ ಸಹಕಾರ ಸಪ್ತಾಹ ಯಶಸ್ವಿಯಾಗಿ ಜರುಗಿದೆ ಎಂದರು.

ಸಹಕಾರ ಒಕ್ಕೂಟದ ನಿರ್ದೇಶಕ ಎಂ.ಜಿ. ಷಣ್ಮುಖಪ್ಪ ಮಾತನಾಡಿ, "ಎಲ್ಲರೂ ಒಬ್ಬನಿಗಾಗಿ, ಒಬ್ಬನು ಎಲ್ಲರಿಗಾಗಿ ಎಂಬ ಸಹಕಾರದ ತತ್ವದಡಿ ಸಹಕಾರ ಸಂಘಗಳು ಜನ್ಮತಾಳಿದ್ದು, ಸಹಕಾರ ಸಂಘಗಳ ತತ್ವ ಮೌಲ್ಯಗಳನ್ನು ಮರೆತರೆ ಸಂಘಗಳು ವಿನಾಶದ ಹಂಚಿಗೆ ಬಂದು ನಿಲ್ಲುತ್ತವೆಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಸುರಹೊನ್ನೆ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಕೆ.ತೀರ್ಥಲಿಂಗಪ್ಪ ವಹಿಸಿದ್ದರು. ಮುಖ್ಯಅತಿಥಿಗಳಾಗಿ ಜಿಲ್ಲಾ ಒಕ್ಕೂಟದ ಉಪಾಧ್ಯಕ್ಷೆ ಮಂಜುಳ ಗಣೇಶ್, ಹೊನ್ನಾಳಿ ಶಿವ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಚಂದ್ರಪ್ಪ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ನೌಕರರ ಸಂಘದ ಅಧ್ಯಕ್ಷ ಗಣೇಶ್, ಹಾಲು ಉತ್ಪಾದಕರ ಸಹಕಾರ ಸಂಘಗಳ ನೌಕರರ ಸಂಘದ ಅಧ್ಯಕ್ಷ ಆರ್. ಸಂಜೀವಕುಮಾರ್ , ಡಿ.ಸಿ.ಸಿ ಬ್ಯಾಂಕ್ ಕ್ಷೇತ್ರಾಧಿಕಾರಿ ಬಿ.ಪಿ ವಿಜಯಕುಮಾರ್, ಎ. ಲೋಕೇಶ್, ಪಿ.ಜಿ ಪಾಲಾಕ್ಷಿ ಮತ್ತು ಹೆಚ್.ಬಿ ಸುರೇಶ್, ಶಿಮುಲ್ ವ್ಯವಸ್ಥಾಪಕ ಕೆ.ಎಂ ಜಗದೀಶ್, ಉಪ ವ್ಯವಸ್ಥಾಪಕ ಡಾ.ಸಂಜಯ್ ವಿಸ್ತರಣಾಧಿಕಾರಿ ಶ್ರೀಮತಿ.ಶ್ವೇತಾ. ಎನ್, ಗುಂಡಪ್ಪಯರಗಟ್ಟಿ, ವಸಂತಕುಮಾರ್ ಉಪಸ್ಥಿತರಿದ್ದರು. ಯೂನಿಯನ್ ಪ್ರಭಾರ ಸಿಇಒ ಕೆ.ಹೆಚ್ ಸಂತೋಷ್‌ಕುಮಾರ್ ಸ್ವಾಗತಿಸಿದರು. ಹೊನ್ನಾಳಿಯ ಶಿವ ಕ್ರೆಡಿಟ್‌ಕೋ–ಆಪರೇಟಿವ್ ಸೊಸೈಟಿ ವ್ಯವಸ್ಥಾಪಕ ಹೆಚ್.ಎನ್.ರುದ್ರೇಶ್ ವಂದಿಸಿದರು.

ಅಡವೀಂದ್ರಸ್ವಾಮಿ ಮಠದಲ್ಲಿ ಶ್ರೀಅನ್ನಪೂರ್ಣೇಶ್ವರಿ ದೇವಿಯ ಸಂಭ್ರಮದ ಕಾರ್ತಿಕೋತ್ಸವ

ಸರ್ವೋತ್ಕೃಷ್ಟ ಜ್ಞಾನಕ್ಕೆ ಶಿರಬಾಗಿ ನಮಿಸುವ ಪ್ರತೀಕವೇ ದೀಪ ಪ್ರಜ್ವಲನೆ

ಗದಗ: ದೀಪ ಜ್ಞಾನದ ಸಂಕೇತ. ಕತ್ತಲೆ ಅಜ್ಞಾನದ ಸಂಕೇತ. ಬೆಳಕು ಕತ್ತಲೆಯನ್ನು ದೂರ ಮಾಡುತ್ತ ಹೋದ ಹಾಗೆ ಜ್ಞಾನವು, ಅಜ್ಞಾನವನ್ನು ದೂರ ಮಾಡುತ್ತದೆ. ಸರ್ವೋತ್ಕೃಷ್ಟ ಜ್ಞಾನಕ್ಕೆ ಶಿರಬಾಗಿ ನಮಿಸುವ ಪ್ರತೀಕವೇ ದೀಪ ಪ್ರಜ್ವಲನೆ. ಇದು ನಮ್ಮ ಎಲ್ಲ ಆಲೋಚನೆ, ಚಟುವಟಿಕೆಗಳಿಗೆ ಸಾಕ್ಷಿ ಎಂದು ಶ್ರೀಮಠದ ಶಿವಾನುಭವ ಸಮಿತಿಯ ಅಧ್ಯಕ್ಷರಾದ ಡಾ.ರಾಜೇಂದ್ರ ಎಸ್. ಗಡಾದ ಅವರು ಹೇಳಿದರು.

ನಗರದ ಮುಳಗುಂದ ನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ಶ್ರೀಮಠದಲ್ಲಿ ಆರಾಧ್ಯ ದೈವ ಶ್ರೀಅನ್ನಪೂರ್ಣೇಶ್ವರಿ ದೇವಿಯ ಕಾರ್ತಿಕೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅವರು, ದೀಪ ಪ್ರಜ್ವಲಿಸುವ ಮೂಲಕ ಕಾರ್ತಿಕೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾರ್ತಿಕೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ವೇದಮೂರ್ತಿ ಶ್ರೀಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ ಅವರು ಮಾತನಾಡಿ, ಜ್ಞಾನ, ಕರುಣೆ, ಸದ್ಭಾವನೆಗಳೇ ಈ ದೀಪಗಳು. ನಾವು ನಮ್ಮೊಳಗಿನ ಕೆಟ್ಟ ವಿಚಾರಗಳು, ಅಸೂಯೆ ಮತ್ತು ಸ್ವಾರ್ಥಗಳನ್ನು ದೂರಮಾಡಿ, ಪ್ರೀತಿ ಮತ್ತು ಸಕಾರಾತ್ಮಕತೆಯನ್ನು ಬೆಳೆಸಿಕೊಳ್ಳೋಣ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಶ್ರೀಮಠದ ಜಾತ್ರಾ ಮಹೋತ್ಸವ ಸಮಿತಿಯ ಮಹಿಳಾ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಸುವರ್ಣಾ ಸದಾಶಿವ ಮದರಿಮಠ, ನಿವೃತ್ತ ಪ್ರಾಚಾರ್ಯ ಪೊ. ಕೆ.ಎಚ್. ಬೇಲೂರ, ನಿವೃತ್ತ ತಹಶೀಲ್ದಾರ್ ಎಲ್. ಎಸ್. ನೀಲಗುಂದ, ಕೈಗಾರಿಕೋದ್ಯಮಿ ಎಸ್. ಎಸ್. ಪಾಟೀಲ ಅರಹುಣಸಿ, ನಿವೃತ್ತ ಸಹಕಾರಿ ಇಲಾಖೆ ಅಧಿಕಾರಿಗಳಾದ ಬಿ.ಎಂ. ಬಿಳೆಎಲಿ, ಎನ್.ಎಸ್. ಬಳಿಗಾರ, ಬಿ.ಡಿ. ಕಿಲಬನವರ, ಕೃಷಿ ವಿಜ್ಞಾನಿ ಡಾ.ಎಸ್.ಕೆ. ನಾಲವತ್ತವಾಡಮಠ, ಶ್ರೀಮತಿ ಸುಶೀಲಾ ಗಂಗಣ್ಣ ಕೋಟಿ, ನಿವೃತ್ತ ಜಿಲ್ಲಾ ತೋಟಗಾರಿಕೆ ಇಲಾಖೆ ಉಪನಿರ್ದೇಶಕರಾದ ಬಸವರಾಜ

ವಂದೇಮಾತರಂ ಸ್ವಾತಂತ್ರ್ಯ ಚಳವಳಿಯ ರಾಷ್ಟ್ರೀಯ ಗೀತೆ: ಎನ್.ಬಿ.ಪ್ರದೀಪ್‌ಕುಮಾರ್

ವೈಸಿರಿ ಕ್ಯಾಂಪಸ್‌ನಲ್ಲಿ 'ವಂದೇ ಮಾತರಂ' ಗೀತೆಯ 150 ವರ್ಷಗಳ ಸಂಭ್ರಮಾಚರಣೆ

ತುಮಕೂರು: ವಂದೇಮಾತರಂ ಕೇವಲ ಗೀತೆಯಲ್ಲ, ಇದು ಭಾರತೀಯ ಸ್ವಾತಂತ್ರ್ಯ ಸಂಗ್ರಾಮದ ಹೃದಯಸ್ಪಂದನವಾಗಿದೆ ಎಂದು ವಿದ್ಯಾವಾಹಿನಿ ಸಮೂಹ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎನ್.ಬಿ. ಪ್ರದೀಪ್ ಕುಮಾರ್ ಹೇಳಿದರು.

ನಗರದ ವೈಸಿರಿ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಟೆಕ್ನಾಲಜಿ ಮತ್ತು ವೈಸಿರಿ ಪದವಿ ಪೂರ್ವ ಕಾಲೇಜಿನ ಸಹಯೋದಲ್ಲಿ ವೈಸಿರಿ ಕ್ಯಾಂಪಸ್‌ನಲ್ಲಿ 'ವಂದೇ ಮಾತರಂ' ಗೀತೆಗೆ 150 ವರ್ಷಗಳು ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ ವಂದೇಮಾತರಂ ಗೀತೆಯ 150ನೇ ವರ್ಷಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಂಕಿಮಚಂದ್ರ ಚಟರ್ಜಿ ಅವರು 1875ರಲ್ಲಿ ರಚಿಸಿದ ವಂದೇಮಾತರಂ ಗೀತೆ ಈ ವರ್ಷ 150 ವರ್ಷಗಳ ಇತಿಹಾಸವನ್ನು ಪೂರ್ಣಗೊಳಿಸಿದೆ. ಬ್ರಿಟಿಷ್ ಆಡಳಿತದ ಕಾಲದಲ್ಲಿ ಈ ಗೀತೆಯು ಬಂಕಿಮಚಂದ್ರ ಚಟರ್ಜಿ ಅವರು 1875ರಲ್ಲಿ ರಚಿಸಿದ ವಂದೇಮಾತರಂ ಗೀತೆ ಈ ವರ್ಷ 150 ವರ್ಷಗಳ ಇತಿಹಾಸವನ್ನು ಪೂರ್ಣಗೊಳಿಸಿದೆ. ಬ್ರಿಟಿಷ್ ಆಡಳಿತದ ಕಾಲದಲ್ಲಿ ಈ ಗೀತೆಯು ಭಾರತೀಯರಲ್ಲಿ ಪ್ರತಿರೋಧದ ಭಾವನೆಯನ್ನು ಎಚ್ಚರಿಸಿತು. ಎರಡು ಪದಗಳ ಈ ಮಂತ್ರ ಲಕ್ಷಾಂತರ ಭಾರತೀಯರನ್ನು ಸ್ವಾತಂತ್ರ್ಯ ಹೋರಾಟಕ್ಕೆ ಸೆಳೆಯಿತು ಮತ್ತು ಸಾವಿರಾರು ಜನರನ್ನು ತ್ಯಾಗಕ್ಕೆ ಪ್ರೇರೇಪಿಸಿತು. 'ಜನ ಗಣ ಮನ' ರಾಷ್ಟ್ರಗೀತೆಯಾಗಿದ್ದರೂ, ಸ್ವಾತಂತ್ರ್ಯ ಚಳವಳಿಯ ಸಂದರ್ಭದಲ್ಲಿ 'ವಂದೇ ಮಾತರಂ' ಗೀತೆ ಜನರಲ್ಲಿ ಗೌರವ ಹಾಗೂ ಹೆಮ್ಮೆಯ ಭಾವವನ್ನು ಮೂಡಿಸಿತು ಎಂದರು.

'ವಂದೇ ಮಾತರಂ' ಎಂಬ ಪದಗುಚ್ಛವು ಮಾತೃಭೂಮಿಗೆ ನಮನವನ್ನು ಮಾತ್ರ ಸೂಚಿಸದೆ, ತ್ಯಾಗ, ಧೈರ್ಯ ಮತ್ತು ರಾಷ್ಟ್ರದ ಬಗೆಗೆ ಅತ್ಯುನ್ನತ ಪ್ರೇಮದ ಭಾವನೆಯನ್ನು ಸಾರುತ್ತದೆ. ಇದರ ಅಮೂಲ್ಯ ಕೊಡುಗೆಯನ್ನು ಗುರುತಿಸಿದ ಸಂವಿಧಾನ ಸಭೆಯು 24 ಜನವರಿ 1950ರಂದು ವಂದೇ ಮಾತರಂಗೆ ರಾಷ್ಟ್ರಗೀತೆಗೆ ಸಮಾನ ಸ್ಥಾನಮಾನ ಹಾಗೂ ಗೌರವವನ್ನು ನೀಡಿತು. ಈ ಗೀತೆ ಯಾವುದೇ ನಿರ್ದಿಷ್ಟ ಧರ್ಮದ ಪ್ರತೀಕವಲ್ಲ, ಬದಲಾಗಿ ನಮ್ಮೆಲ್ಲರನ್ನು ಒಂದಾಗಿಸುವ ರಾಷ್ಟ್ರೀಯತೆಯ ಸಾಕಾರ ರೂಪವಾಗಿದೆ ಎಂದು ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಕೆ.ಎಸ್.ಸಿದ್ಧಲಿಂಗಪ್ಪ ಮಾತನಾಡಿ, ಇದು ಭಾರತದ ಸ್ವಾತಂತ್ರ್ಯ ಚಳವಳಿಗೆ ಸ್ಫೂರ್ತಿ ನೀಡಿದ ಮತ್ತು ರಾಷ್ಟ್ರೀಯ ಹೆಮ್ಮೆ ಹಾಗೂ ಏಕತೆಯನ್ನು ಜಾಗ್ರತಗೊಳಿಸುತ್ತಿರುವ ಗೀತೆಯಾಗಿದೆ. ಈ ಗೀತೆ ಸ್ವಾತಂತ್ರ್ಯ ಸಂಗ್ರಾಮದ ಮೂಲಮಂತ್ರವಾಗಿತ್ತು. ನೊಬೆಲ್ ಪ್ರಶಸ್ತಿ ಪುರಸ್ಕೃತ ರವೀಂದ್ರನಾಥ ಟಾಗೋರ್ ಅವರು ಈ ಗೀತೆಯನ್ನು ಹಾಡಿದ್ದರಿಂದ ಅದಕ್ಕೆ ಹೆಚ್ಚಿನ ಪ್ರಚಾರ ದೊರಕಿತು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವೈಸಿರಿ ಕಾಲೇಜಿನ 1500 ವಿದ್ಯಾರ್ಥಿಗಳು ಏಕಕಾಲದಲ್ಲಿ ವಂದೇಮಾತರಂ ಗೀತೆಯನ್ನು ಹಾಡಿ ಗೌರವ ಸಲ್ಲಿಸುವ ಮೂಲಕ ರಾಷ್ಟ್ರೀಯ ಏಕತೆ ಮತ್ತು ದೇಶಭಕ್ತಿಯ ಸಂದೇಶವನ್ನು ಸಾರಿದರು.ಕಾರ್ಯಕ್ರಮದಲ್ಲಿ ವಿ–ಟೆಕ್ ಸೊಲ್ಯುಷನ್ಸ್‌ನ ವ್ಯವಸ್ಥಾಪಕ ನಿರ್ದೇಶಕಿ ಶ್ರೀಮತಿ ನಾಗಪ್ರಿಯಾ ಕೆ.ಜೆ., ವೈಸಿರಿ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಟೆಕ್ನಾಲಜಿಯ ಪ್ರಾಂಶುಪಾಲರಾದ ಅಮೂಲ್ಯ ಜಿ, ವೈಸಿರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪೂರ್ಣಗಂಗಾ ಎಚ್.ಎಂ., ಮತ್ತು ವಿದ್ಯಾವಾಹಿನಿ ಶಿಕ್ಷಣ ಸಂಸ್ಥೆಯ ಸಿಡಿಸಿ ಮುಖ್ಯಸ್ಥ ಹಾಗೂ ಎಂಬಿಎ ವಿಭಾಗದ ನಿರ್ದೇಶಕ ಡಾ. ಪ್ರಸನ್ನಕುಮಾರ್ ಟಿ.ಎಂ. ಸೇರಿದಂತೆ ಅನೇಕ ಗಣ್ಯಾತಿಥಿಗಳು, ಬೋಧಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕೆಳದಿ ಶಿವಪ್ಪನಾಯಕ ವಿವಿಯಿಂದ ಹೊಸ ಭತ್ತ ತಳಿ ಅಭಿವೃದ್ಧಿ । ಅಧಿಕೃತ ಬಿಡುಗಡೆ

ಸಣ್ಣ ಕೆಂಪಕ್ಕಿ ಸಹ್ಯಾದ್ರಿ ಸಿಂಧೂರ

ಶಿವಮೊಗ್ಗ: ದಕ್ಷಿಣ ಭಾರತದಲ್ಲಿ ಮೊತ್ತ ಮೊದಲ ಬಾರಿಗೆ ಸಣ್ಣ ಕೆಂಪಕ್ಕಿ ಭತ್ತದ ತಳಿ 'ಸಹ್ಯಾದ್ರಿ ಸಿಂಧೂರ'ವನ್ನು ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಿದೆ.

ಕೆಂಪಕ್ಕಿಯಲ್ಲಿ ಜ್ಯೋತಿ, ವಾಳ್ಳ, ರತ್ನಚೂಡಿ, ಕಾರ್ಕಳ ಜಯ, ಇತ್ತೀಚೆಗೆ ಸಹ್ಯಾದ್ರಿ ಕೆಂಪು ಮುಕ್ತಿ ಸೇರಿ ಹಲವು ತಳಿಗಳಿದ್ದರೂ ಇವೆಲ್ಲವೂ ದಪ್ಪ ಅಕ್ಕಿ. ದಕ್ಷಿಣ ಭಾರತದಲ್ಲಿ ಸ್ಥಳೀಯ ಹವಾಗುಣಕ್ಕೆ ಹೊಂದಿಕೆಯಾಗುವಂತಹ, ಪೌಷ್ಟಿಕಾಂಶಗಳಿಂದ ಕೂಡಿದ ಸಣ್ಣ ಕೆಂಪಕ್ಕಿ ಇರಲಿಲ್ಲ. ಹೀಗಾಗಿ ದಪ್ಪ ಕೆಂಪಕ್ಕಿಯನ್ನು ಮಕ್ಕಳು ಊಟ ಮಾಡುವುದಿಲ್ಲ ಎಂದು ಕೆಲವರು ಸೋನಾ ಮಸೂರಿಯಂತಹ ಬಿಳಿ ಸಣ್ಣಕ್ಕಿಯನ್ನೇ ಬಳಸುತ್ತಿದ್ದಾರೆ. ರೈತರು ಮತ್ತು ಗ್ರಾಹಕರ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿವಿ ಸಂಶೋಧನಾ ನಿರ್ದೇಶಕ ಡಾ.

ಬಿ.ಎಂ.ದುಷ್ಯಂತ್ ಕುಮಾರ್ ನೇತೃತ್ವದ ವಿಜ್ಞಾನಿಗಳ ತಂಡ ಪ್ರಯೋಗಾಲಯ ಮತ್ತು ರೈತರ ತಾಕುಗಳಲ್ಲಿ ಹಲವು ವರ್ಷಗಳ ಕಾಲ ಪ್ರಯೋಗ ನಡೆಸಿ ದಕ್ಷಿಣ ಭಾರತದ ಮೊತ್ತ ಮೊದಲ ಸಣ್ಣ ಕೆಂಪಕ್ಕಿ 'ಸಹ್ಯಾದ್ರಿ ಸಿಂಧೂರ' ತಳಿಯನ್ನು ಅಭಿವೃದ್ಧಿಪಡಿಸಿದೆ.

ಈ ತಳಿ ಅಧಿಕ ಕಬ್ಬಿಣ, ಸತು, ಪ್ರೋಟೀನ್, ವಿಟಮಿನ್ ಸಿ ಮತ್ತು ರೋಗ ನಿರೋಧಕ ಶಕ್ತಿ ಹೆಚ್ಚಿಸುವಂತಹ ಅಂಶಗಳನ್ನು

ಸಹ್ಯಾದ್ರಿ ಸಿಂಧೂರ ಸಣ್ಣ ಕೆಂಪಕ್ಕಿ.

ಒಳಗೊಂಡಿದೆ. ಕಡಿಮೆ ಪೈಸೆಮಿಕ್ ಸೂಚ್ಯಂಕ ಅಲ್ಲದೆ ಬೆಂಕಿ ರೋಗಕ್ಕೆ ಮಧ್ಯಮ ಪ್ರತಿರೋಧಕತೆ ಹೊಂದಿದೆ. "120 ದಿನಗಳಲ್ಲಿ ಕಟಾವಿಗೆ ಬರುವ ಈ ತಳಿಯು ಹೆಕ್ಟೇರ್‌ಗೆ 53ರಿಂದ 55 ಕ್ವಿಂಟಾಲ್ ಇಳುವರಿ ನೀಡುತ್ತದೆ. ಅತ್ಯಧಿಕವಾಗಿ ಹುಲ್ಲೂ ದೊರೆಯುತ್ತದೆ. ಅತಿಹೆಚ್ಚು ತೆಂಡೆ ಒಡೆಯುವುದಲ್ಲದೆ ದಿಂಡು ದಪ್ಪ ಇರುತ್ತದೆ. ಹೀಗಾಗಿ ಭತ್ತ ನೆಲಕ್ಕೆ ಒರಗುವ ಸಾಧ್ಯತೆ ಕಡಿಮೆ. ಕಾಂಡ ಕೊರಕ, ಬಿಳಿ ಹೇನು ಕೀಟಗಳ ಬಾಧೆಯನ್ನೂ ತಡೆಯುವ ಶಕ್ತಿ ಇದಕ್ಕಿದೆ ಎನ್ನುತ್ತಾರೆ ಈ ತಳಿಯ ಬಿತ್ತನೆ ಬೀಜವನ್ನು ಇತರ ರೈತರಿಗೆ ವಿತರಣೆ ಮಾಡುತ್ತಿರುವ ದಾವಣಗೆರೆ ತಾಲೂಕು ಚಂದನಳ್ಳಿ ಗ್ರಾಮದ ರೈತ ಮಲ್ಲಿಕಾರ್ಜುನ.

10 ಕ್ವಿಂಟಾಲ್ ಬಿತ್ತನೆ ಬೀಜ ವಿತರಣೆ: ತಳಿಯನ್ನು ಎನ್‌ಡಿಪಿಸಿಆರ್‌ನಲ್ಲಿ ನೋಂದಣಿ ಮಾಡಿದ್ದು ವಿಶ್ವವಿದ್ಯಾಲಯದ ಆವರಣದಲ್ಲಿ ನ.7ರಂದು ಆರಂಭವಾಗುವ ಕೃಷಿ ಮತ್ತು

ಸಣ್ಣ ಕೆಂಪಕ್ಕಿಗೆ ಇರುವ ಭಾರಿ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಸಹ್ಯಾದ್ರಿ ಸಿಂಧೂರ ಸಣ್ಣ ಕೆಂಪಕ್ಕಿ ಭತ್ತದ ತಳಿಯನ್ನು ಅಭಿವೃದ್ಧಿಪಡಿಸಲಾಗಿದೆ. ಅಧಿಕೃತ ಉದ್ಘಾಟನೆಗೆ ಮುನ್ನವೆ ಬಿತ್ತನೆ ಬೀಜಕ್ಕೆ ಹೆಚ್ಚು ಬೇಡಿಕೆ ಸೃಷ್ಟಿಯಾಗಿದೆ.

–ಡಾ. ಬಿ.ಎಂ.ದುಷ್ಯಂತ್‌ಕುಮಾರ್ ನಂಶೋಧನಾ ನಿರ್ದೇಶಕ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿವಿ

ತೋಟಗಾರಿಕೆ ಮೇಳದಲ್ಲಿ ಅಧಿಕೃತವಾಗಿ ಬಿಡುಗಡೆ ಆಗುತ್ತದೆ.

ಮಾಡಿಕೊಳ್ಳುತ್ತಿದ್ದಾರೆ.

ವಿಶ್ವವಿದ್ಯಾಲಯವು ಈ ವರ್ಷ ಇದೇ ತಳಿಯ 10 ಕ್ವಿಂಟಾಲ್ ಬಿತ್ತನೆ ಬೀಜವನ್ನು ರೈತರಿಗೆ ಒದಗಿಸಿದೆ. ಅಚ್ಚರಿ ಎಂದರೆ ಉದ್ಘಾಟನೆಗೂ ಮುನ್ನವೇ ಬೆಂಗಳೂರು, ಮಂಗಳೂರು ಮತ್ತು ಕೇರಳದಲ್ಲಿ ಸಣ್ಣ ಕೆಂಪಕ್ಕಿ ಭತ್ತಕ್ಕೆ ಭಾರಿ ಬೇಡಿಕೆ ಸೃಷ್ಟಿಯಾಗಿದೆ. ಕೆಲ ರೈತರು ಸಾವಯವ ಪದ್ಧತಿಯಲ್ಲಿ ಈ ಭತ್ತವನ್ನು ಬೆಳೆದು ಅಕ್ಕಿ ಮಾಡಿಸಿ 5, 10 ಕೆ.ಜಿ. ಪ್ಯಾಕೆಟ್ ಮಾಡಿ ಮಾರಾಟ ಮಾಡುತ್ತಿದ್ದಾರೆ. ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೈತರು ವಿಶ್ವವಿದ್ಯಾಲಯ ಮತ್ತು ಪ್ರಯೋಗಾರ್ಥವಾಗಿ ಬೆಳೆದ ರೈತರಿಂದ ಬಿತ್ತನೆ ಬೀಜವನ್ನು ಪಡೆದು ಅಧಿಕ ಬೀಜೋತ್ಪಾದನೆ

ಕೃಷಿ–ತೋಟಗಾರಿಕೆ ಮೇಳ–2025

ಕೃಷಿ ಉದ್ದಿಮೆಯಾಗಿ ಪರಿವರ್ತನೆಗೊಂಡು ರೈತರು ಬಲವರ್ಧನೆಗೊಳ್ಳಬೇಕು : ಚಲುವರಾಯಸ್ವಾಮಿ

ಶಿವಮೊಗ್ಗ: ಕಡಿಮೆ ವೆಚ್ಚದಲ್ಲಿ ಉತ್ತಮ ಇಳುವರಿ ಮತ್ತು ಆದಾಯ ನೀಡುವ ಬೆಳೆಗಳನ್ನು ನೀಡುವ ಉದ್ದೇಶದಿಂದ ಇಂತಹ ಕೃಷಿ ಮೇಳಗಳನ್ನು ಆಯೋಜಿಸಲಾಗಿದ್ದು, ಇದನ್ನು ಬಳಸಿಕೊಂಡು ರೈತರು ಉದ್ಯಮಿಗಳಾಗಿ ಬಲವರ್ಧನೆಗೊಳ್ಳಬೇಕೆಂದು ಕೃಷಿ ಸಚಿವರು ಹಾಗೂ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹ ಕುಲಾಧಿಪತಿ ಎನ್. ಚೆಲುವರಾಯಸ್ವಾಮಿ ಕರೆ ನೀಡಿದರು.

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಮತ್ತು ಕೃಷಿ ಸಂಬಂಧಿತ ಅಭಿವೃದ್ಧಿ ಇಲಾಖೆಗಳು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಬಿ.ಸಿ. ಟ್ರಸ್ಟ್ ಇವರ ಸಹಯೋಗದೊಂದಿಗೆ "ಸಹಕಾರ ಕೃಷಿಯಿಂದ ಸುಸ್ಥಿರ ಕೃಷಿ" ಶೀರ್ಷಿಕೆ ಅಡಿಯಲ್ಲಿ ಇಂದಿನಿಂದ ನ.09 ರವರೆಗೆ ಕೃಷಿ ಮಹಾವಿದ್ಯಾಲಯ ನವುಲೆ ಆವರಣದಲ್ಲಿ ಏರ್ಪಡಿಸಲಾಗಿರುವ ಕೃಷಿ–ತೋಟಗಾರಿಕೆ ಮೇಳ–2025 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅತ್ಯುತ್ತಮ ಕೃಷಿ ಮೇಳ ಮತ್ತು ಪ್ರದರ್ಶವನ್ನು ಏರ್ಪಡಿಸಲಾಗಿದ್ದು, ಭತ್ತದ

ಮತ್ತು ಇತರೆ ಉತ್ತಮ ತಳಿಗಳನ್ನು ಬಿಡುಗಡೆಗೊಳಿಸಲಾಗಿದೆ. ರೈತರಿಗೆ ವಿಶ್ವವಿದ್ಯಾಲಯ ನೀಡಾಬೇಕಾಗಿರುವುದು ಇದೆನ್ನೇ. ಕೃಷಿಯನ್ನು ಉದ್ದಿಮೆಯಾಗಿ ಪರಿವರ್ತಿಸಿ ರೈತರಿಗೆ ಉತ್ತಮ ಆದಾಯ ನೀಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಲವು ಸೌಲಭ್ಯಗಳು, ಕಾರ್ಯಕ್ರಮಗಳನ್ನು ನೀಡುತ್ತಿವೆ. ಕೆಪೆಕ್ ಸಂಸ್ಥೆಯು ರಾಜ್ಯದಲ್ಲಿ 5 ಸಾವಿರ ಘಟಕಗಳಿಗೆ ಸಬ್ಸಿಡಿ ನೀಡಿದೆ ಎಂದ ಅವರು ರೈತರಿಗೆ ಎಂಒ 4 ತಳಿಯನ್ನು ನೀಡಲು ಕೃಷಿ ಇಲಾಖೆ ಮತ್ತು ವಿಶ್ವವಿದ್ಯಾಲಯಗಳು ಬದ್ಧವಾಗಿದೆ.

ಫಿಲಿಫೈನ್ಸ್ ದೇಶದಲ್ಲಿ ಸುಮಾರು 25 ರಿಂದ 30 ದಿನಗಳ ಕಾಲ ಮಳೆ ನಿರಂತರವಾಗಿ ಬಂದರೂ ಹಾನಿಯಾಗದಂತಹ ಭತ್ತದ ತಳಿಯನ್ನು ಕಂಡು ಹಿಡಿದಿದ್ದು, ಮುಂದಿನ ದಿನಗಳಲ್ಲಿ ನಮ್ಮ ವಿಜ್ಞಾನಿಗಳೂ ರೈತರಿಗೆ ಇಂತಹ ತಳಿಗಳನ್ನು ಸಂಶೋಧಿಸಿ ನೀಡುವರು ಎಂದು ಭರವಸೆ ವ್ಯಕ್ತಪಡಿಸಿದರು.ರಾಜ್ಯದಲ್ಲಿ ಬಿತ್ತನೆ ಬೀಜ ಮತ್ತು ಗೊಬ್ಬರಕ್ಕೆ ಅಭಾವ ಉಂಟಾಗಿಲ್ಲ. ಸಾಕಷ್ಟು ಪೂರೈಕೆ ಮಾಡಲಾಗಿದೆ. ಕೇಂದ್ರದಿಂದ 3.5 ಲಕ್ಷ ಮೆ.ಟನ್ ಗೊಬ್ಬರ ಸರಬರಾಜು ಕೊರತೆಯಾದರೂ ರೈತರಿಗೆ ತೊಂದರೆಯಾಗದಂತೆ ಕ್ರಮ ವಹಿಸಲಾಗಿದೆ. ಕೃಷಿ ಕೃಷಿ ಹೊಂಡ ಯಾರು ಎಷ್ಟು ಬೇಕಾದರೂ ಮಾಡಲು ಅವಕಾಶ ಕಲ್ಪಿಪಸಲಾಗಿದೆ. ಪ್ರಯೋಗಾಲಯ ಬಲವರ್ಧನೆ ಮಾಡುವ ಕೆಲಸ ಆಗುತ್ತಿದೆ. ರೈತರು ಮಣ್ಣು ಪರೀಕ್ಷೆ ಮಾಡಿಸಿ ಎಂದ ಅವರು ಇಡೀ ರಾಜ್ಯದಲ್ಲಿ ಕೃಷಿಯಲ್ಲಿ ಡಿಜಿಟಲ್ ತಂತ್ರಜ್ಞಾನ ತರುವ ಪ್ರಯತ್ನ ಮಾಡಲಾಗುತ್ತಿದೆ ಎಂದರು. ಇದೇ ವೇಳೆ ಉತ್ತಮ ರೈತ ಮತ್ತು ರೈತ ಮಹಿಳೆ ಪ್ರಶಸ್ತಿಯನ್ನು ವಿತರಣೆ ಮಾಡಿ ಗೌರವಿಸಲಾಯಿತು ಕಾರ್ಯಕ್ರಮದಲ್ಲಿ ರಾಜ್ಯ ಜವಳಿ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಚೇತನ್ ಕೆ, ಕಾಡಾ ಅಧ್ಯಕ್ಷ ಡಾ.ಅಂಶುಮಂತ್, ಕೃಷಿಕ ಸಮಾಜದ ರಾಜ್ಯಾಧ್ಯಕ್ಷ ಎಸ್.ಆರ್ ಮಜುನಾಥ ಗೌಡ, ಡಾ.ಹನುಮಂತಪ್ಪ, ಆಡಳಿತ ಮಂಡಳಿ ಸದಸ್ಯರಾದ ಬಿ.ಕೆ ಕುಮಾರಸ್ವಾಮಿ, ಜೆ ಜೆ ಕಾವೇರಪ್ಪ, ದೇವಿಕುಮಾರ್, ಹಾಪ್‌ಕಾಮ್ಸ್ ಅಧ್ಯಕ್ಷ ವಿಜಯಕುಮಾರ್, ರಾಮಕೃಷ್ಣ ಆಶ್ರಮದ ವಿನಯಾನಂದ ಸರಸ್ವತಿ ಸ್ವಾಮೀಜಿ, ವಿವಿಧ ಜಿಲ್ಲೆಯ ಕೃಷಿ ವಿಶ್ವವಿದ್ಯಾಲಯಗಳ ಕುಲಪತಿಗಳು, ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ಸದಸ್ಯರುಗಳು, ವಿಶ್ವವಿದ್ಯಾಲಯದ ಅಧಿಕಾರಿ ವರ್ಗದವರು, ಬೋಧಕ, ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಗೂ ರೈತರು ಭಾಗವಹಿಸಿದ್ದರು.

ಬಳ್ಳಾರಿ ಘಟಕದ ಕೃಷಿ ಸಮಾಜದ ನೂತನ ಕಟ್ಟಡ ಉದ್ಘಾಟನಾ ಸಮಾರಂಭ

ಬಳ್ಳಾರಿ: ಜಿಲ್ಲಾಡಳಿತ, ಕರ್ನಾಟಕ ಪ್ರದೇಶ ಕೃಷಿಕ ಸಮಾಜ ಬೆಂಗಳೂರು, ಕೃಷಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ಘಟಕದ ಕೃಷಿ ಸಮಾಜದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭವು ನ.08 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಹಳೇ ತಾಲ್ಲೂಕು ಕಚೇರಿ ಆವರಣದಲ್ಲಿ ನಡೆಯಲಿದೆ.

ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಕಟ್ಟಡದ ಉದ್ಘಾಟನೆ ನೆರವೇರಿಸುವರು.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಘನ ಉಪಸ್ಥಿತರಿರುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್. ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್. ಗಣೇಶ್, ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ,

ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತದ ಉಪಾಧ್ಯಕ್ಷ ಹೆಚ್.ಲಕ್ಷ ☐☐ಣ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಕರ್ನಾಟಕ ಪ್ರದೇಶ ಕೃಷಿಕ ಸಮಾಜದ ಆಡಳಿತ ಅಧ್ಯಕ್ಷ ಮಂಜುನಾಥ್ ಗೌಡ ಎಸ್.ಆರ್., ಬಳ್ಳಾರಿ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಗಾದೆಪ್ಪ, ಕೃಷಿ ಸಮಾಜದ ಉಪಾಧ್ಯಕ್ಷ ಎಸ್. ಕೆ ವಿಶಾಲಾಕ್ಷಿ ಕುಮಾರಸ್ವಾಮಿ, ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಸುರೇಶ್ ನಂದಿ.ಪಿ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕೃಷಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಎಸ್ ಸೆಲ್ವಕುಮಾರ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ತ್ರಿಲೋಕಚಂದ್ರ ಕೆ.ವಿ., ಕೃಷಿ ಇಲಾಖೆಯ ಕೃಷಿ ಆಯುಕ್ತ ಯಲಗೌಡ ಶಿವನಗೌಡ ಪಾಟೀಲ್,

ಜಲಾನಯನ ಅಭಿವೃದ್ಧಿ ಇ

ಪ್ರತಿಯೊಬ್ಬ ನಾಗರೀಕನ ಹಂತರಂಗದಲ್ಲಿ ಸ್ವದೇಶಿಯ ಭಾವನೆ ಮೂಡಬೇಕು

ಚಿತ್ರದುರ್ಗ: ಸ್ವಾತಂತ್ರ್ಯ ಹೋರಾಟಕ್ಕೆ ಪ್ರಾರಂಭವಾದ ಕಾಂಗ್ರೆಸ್ ಸೇನಾನಿಯ ಸಂಘಟನೆಯಾಗಿತ್ತು.. ಅದು ರಾಜಕೀಯ ಪಕ್ಷವಾಗಿರಲಿಲ್ಲ.ಈ ಮೇಳಕ್ಕೆ ರಾಜಕೀಯ ಅಣೆಪಟ್ಟಿ ಕಟ್ಟಬಾರದು.ಪ್ರತಿಯೊಬ್ಬ ನಾಗರೀಕನ ಹಂತರಂಗದಲ್ಲಿ ಸ್ವದೇಶಿಯ ಭಾವನೆ ಮೂಡಬೇಕು ಎಂದು ಸಿರಿಗೆರೆಯ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠದ ಶ್ರೀ 1108 ಡಾ॥ ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಕರೆ ನೀಡಿದರು.

ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದ ಶ್ರೀ ಜಗದ್ಗುರು ಶ್ರೀ ಜಯದೇವ ಮುರುಘಾ ರಾಜೇಂದ್ರ ಕ್ರೀಡಾಂಗಣದಲ್ಲಿ

ಇಂದಿನಿಂದ ಆರಂಭವಾದ ಸ್ವದೇಶಿ ಜಾಗರಣ ಮಂಚ್ ಆಯೋಜಿಸಿರುವ ಸ್ವಾವಲಂಬನೆಯ ಪರಿಕಲ್ಪನೆ ಸ್ವದೇಶಿ ಮೇಳದ ಸಾರ್ವಜನಿಕ ಉದ್ಘಾಟನಾ ಸಮಾರಂಭದ ದಿವ್ಯಸಾನ್ನಿಧ್ಯವನ್ನು ವಹಿಸಿ ಮಾತನಾಡಿದ ಶ್ರೀಗಳು, ಈ ಸ್ವದೇಶಿ ಮೇಳ ಕಾರ್ಯಕ್ರಮವು ಕೇವಲ ಬಿಜೆಪಿ ಕಾರ್ಯಕ್ರಮವೋ ಅಥವಾ ಎಲ್ಲರ ಕಾರ್ಯಕ್ರಮವೋ.

ಈ ಕಾರ್ಯಕ್ರಮ ಬಿಜೆಪಿ ಪಕ್ಷದ ಕಾರ್ಯಕ್ರಮವಾಗಿದೆ.. ಕಾಂಗ್ರೆಸ್ ಪಕ್ಷದ ಕಾರ್ಯಕ್ರಮವಾಗಿ ಏಕೆ ಉಳಿದಿಲ್ಲ ಎಂದು ಸಾರ್ವಜನಿಕರು ಪ್ರಶ್ನಿಸಿಕೊಳ್ಳಬೇಕು.ಯಾವ ಪಕ್ಷಕ್ಕೆ ಸ್ವದೇಶಿ ಆದರ್ಶ ಸ್ವಾತಂತ್ರ್ಯ ಪೂರ್ವದಲ್ಲಿ ಇತ್ತೋ ಇಂದು ಅದು ಕಾಣೆಯಾಗಿದೆ..ಇಂದು ಉದ್ಘಾಟನೆಗೆ ಚರಕವನ್ನು ಇಟ್ಟಿದ್ದೀರಿ ಅದು ಸ್ವತಂತ್ರ ಭಾವನೆಯ ಸಂಕೇತ.. ಕಾಂಗ್ರೆಸ್ ಸಂಕೇತವಲ್ಲ.ಮುಂಬರುವ ಸ್ವದೇಶಿ ಮೇಳದಲ್ಲಿ ಕಾಂಗ್ರೆಸ್ ಪಕ್ಷದವರು ಸೇರುವಂತಾಗಬೇಕು ಎಂದರು.ಸ್ವದೇಶಿ ಮೇಳದ ಸಾರ್ವಜನಿಕ ಉದ್ಘಾಟನೆಯನ್ನು ಮಾಡಿದ ಮಾಜಿ ಮುಖ್ಯಮಂತ್ರಿಗಳು ಮತ್ತು ಗದಗ, ಹಾವೇರಿ ಲೋಕಸಭಾ ಕ್ಷೇತ್ರದ ಸದಸ್ಯರಾದ ಬಸವರಾಜ ಎಸ್ ಬೊಮ್ಮಾಯಿ ಮಾತನಾಡಿ, ಸ್ವದೇಶಿ ಭಾವನೆ ಹುಟ್ಟಿದ್ದು ರೈತರಲ್ಲಿ.. ರೈತ ಸ್ವಾಭಿಮಾನಿ ಆಗಿರುತ್ತಾನೋ ಆ ದೇಶ ಸ್ವಾವಲಂಬನೆ ಯಾಗಿರುತ್ತದೆ..ಉದಾರೀಕರಣ, ಜಾಗತೀಕರಣ, ಖಾಸಗಿಕರಣ ಜೊತೆಗೆ ಅಂತರಕರಣ ಸೇರಬೇಕಾಗಿದೆ. ಭಾರತದ ಉತ್ಪನ್ನಗಳಿಗೆ ಭಾರತದ ಮಾರುಕಟ್ಟೆಗಳಷ್ಟೇ ಅಲ್ಲದೇ ವಿದೇಶಿ ಮಾರಕಟ್ಟೆಗಳು ತೆರೆದುಕೊಳ್ಳಬೇಕು ಆವಾಗ ಮಾತ್ರ ಸ್ವದೇಶಿ ಮೇಳ ಯಶಸ್ವಿಯಾಗಲಿದೆ ಎಂದರು. ಮುಖ್ಯ ಅತಿಥಿಗಳು ನಾ,ತಿಪ್ಪೇಸ್ವಾಮಿ, ಸಂಯೋಜಕರಾದ ಕೆ.ಎಸ್. ನವೀನ್, ಸಂಘಟಕರಾದ ರವೀಂದ್ರ ಎಂ,ಸಹ ಸಂಘಟಕರಾದ ಅನಿತ್‌ಕುಮಾರ್, ಕೆ.ಟಿ.ಕುಮಾರ ಸ್ವಾಮಿ, ಸಂಚಾಲಕರಾದ ಸೌಭಾಗ್ಯ ಬಸವರಾಜ್, ಸಹ ಸಂಚಾಲಕರು ಹನುಮಂತೇಗೌಡ ಭಾಗವಹಿಸಿದ್ದರು. ಪ್ರಜ್ವಲ್ ಪ್ರಾರ್ಥಿಸಿದರೆ, ನವೀನ್ ಸ್ವಾಗತಿಸಿದರು, ಮಹಾಂತೇಶ್ ಪ್ರಸ್ತಾವಿಕವಾಗಿ ಮಾತನಾಡಿದರು, ಜಯವರ್ಧನ್ ಕಾರ್ಯಕ್ರಮ ನಿರೂಪಿಸಿದರು. ರವೀಂದ್ರ ವಂದಿಸಿದರು. ಇದಕ್ಕೂ ಮುನ್ನಾ ಸಮಾರಂಭಕ್ಕೆ

ಅಗಮಿಸಿದ ಗಣ್ಯರನ್ನು ಪಂಚಚಾರ್ಯ ಕಲ್ಯಾಣ ಮಂಟಪದಿಂದ ಸಭಾ ವೇದಿಕೆಯವರೆಗೂ ತಮಟೆ, ವೀರಗಾಸೆ, ನಂದಿ ಕೋಲು, ಕರಿಮಾಳಿ, ಕಹಳೆ ಸೇರಿದಂತೆ ವಿವಿಧ ಜನಪದ ಕಲಾತಂಡಗಳೊಂದಿಗೆ ಮೆರವಣಿಗೆಯ ಮೂಲಕ ಕರೆತರಲಾಯಿತು. ಸ್ವದೇಶಿ ಜಾಗರಣ ಮಂಚ್ ಆಯೋಜಿಸಿರುವ ಸ್ವಾವಲಂಬನೆಯ ಪರಿಕಲ್ಪನೆ ಸ್ವದೇಶಿ ಮೇಳದಲ್ಲಿ ಹಾಕಲಾದ ಮಳಿಗೆಗಳನ್ನು ಸಮಾರಂಭದ ಗಣ್ಯರು ವೀಕ್ಷಣೆಯನ್ನು ಮಾಡಿದರು.

ಅಂಚೆ ಇಲಾಖೆ ಸೇವೆ ಜನರ ಮನೆ ಬಾಗಿಲಿಗೆ ಲಭಿಸಲಿದೆ: ಅಂಚೆ ಅಧೀಕ್ಷಕ ಪಿ.ಚಿದಾನಂದ

ಗದಗ: ಅಂಚೆ ಇಲಾಖೆಯ ಮೂಲಕ ರಾಜ್ಯ ಹಾಗೂ ಕೇಂದ್ರ ಸರಕಾರ ವಿವಿಧ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕೆಲಸವನ್ನು ಮಾಡುತ್ತಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಪಿ.ಚಿದಾನಂದ ಅಭಿಪ್ರಾಯಪಟ್ಟರು.

ಪ್ರಧಾನ ಅಂಚೆ ಕಚೇರಿಯಯಲ್ಲಿ ಬುಧವಾರ ನಡೆದ ಗದಗ ವಿಭಾಗದ ಪ್ರಶಸ್ತಿ ಪುರಸ್ಕೃತರಿಗೆ ಬಹುಮಾನ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ ಅವರು, ಪ್ರಸ್ತುತ ಪತ್ರ ವ್ಯವಹಾರ ಜೊತೆಗೆ ಅಂಚೆ ಇಲಾಖೆ ಡಿಜಟಲೀಕರಣ, ಬ್ಯಾಂಕಿಂಗ್,ವಿಮಾ, ಉಳಿತಾಯ ಖಾತೆ, ಠೇವಣಿ, ಅಪಘಾತ ವಿಮೆ ಸೇರಿದಂತೆ ಹಲವು ಯೋಜನೆಗಳನ್ನು ಪರಿಚಯಿಸಲಾಗುತ್ತಿದೆ. ಅವುಗಳನ್ನು ಹೆಚ್ಚೆಚ್ಚು ಜನರಿಗೆ ತಲುಪಿಸುವ ದಿಸೆಯಲ್ಲಿ ಪ್ರತಿಯೊಬ್ಬ ಅಂಚೆ ಸಿಬ್ಬಂದಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಈಗಾಗಲೇ ಹಲವು ವಿಭಾಗದಲ್ಲಿ ಗದಗ ವಿಭಾಗ ರಾಷ್ಟ್ರ ಮತ್ತು ರಾಜ್ಯ ಮಟ್ಟದ ಮುಂಚೂಣಿ ಸ್ಥಾನ ಗಿಟ್ಟಿಸಿಕೊಂಡಿದೆ ಎಂದರು.

ಮಿಷನ್ ಸುರಕ್ಷ ಇದೇ ನ.1ರಿಂದ ಆರಂಭವಾಗಿದೆ ಈ ವಿಭಾಗದಲ್ಲಿ ನಿರೀಕ್ಷಿತ ಗುರಿ ಸಾಧಿಸುವ ಹಿನ್ನಲೆ ಇನ್ನೂ 48 ದಿನ ಕಾಲಾವಕಾಶ ಇದೆ. ಹಾಗಾಗಿ ಎಲ್ಲರೂ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದರು.

ನಾಳೆಯಿಂದ 3 ದಿನಗಳ ವಿಶೇಷ ಮೇಳ ಆಯೋಜಿಸಲಾಗಿದೆ. ಹೆಚ್ಚೆಚ್ಚು ಪಾಲಿಸಿ ಜನರು ಪಡೆದುಕೊಳ್ಳಬೇಕು. 8 ಕ್ಕೂ ಹೆಚ್ಚು ವಿಮೆ ಯೋಜನೆ ಒಳಗೊಂಡಿವೆ. ಇದರಿಂದ ಗದಗ ವಿಭಾಗ ಸಾಧನೆ ವಲಯ ಮತ್ತು ರಾಜ್ಯ,ರಾಷ್ಟ್ರ ಮಟ್ಟದ ಮುಂಚೂಣಿ ಸಾಧನೆ ಸಹಕಾರಿಯಾಗಲಿದೆ ಎಂದರು.

ಮುಂಬರುವ ದಿನಗಳಲ್ಲಿಯೂ ರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿವ ಸಲುವಾಗಿ ಹಲವು ಬಹುಮಾನ ಸಹಿತ ಸ್ಥಾನ ಗಿಟ್ಟಿಸಿಕೊಳ್ಳಲು ಸದಾವಕಾಶವನ್ನು ಸದ್ಬಳಕೆಗೆ ಮುಂದಾಗಬೇಕು ಎಂದರು.

ಎರಡು ವಾರ ವಿಶೇಷ ಉಳಿತಾಯ ಪಾಕ್ಷಿಕ..

ಅಂಚೆ ಇಲಾಖೆ ಗದಗ ವಿಭಾಗದಿಂದ ಉಳಿತಾಯ ಪಾಕ್ಷಿಕ ಎರಡು ವಾರ ವಿಶೇಷ ಮೇಳ ನಡೆಯಲಿದೆ. ಹಾಗಾಗಿ ಎಲ್ಲರೂ ಹೆಚ್ಚೆಚ್ಚು ಖಾತೆ ತೆರೆಯಲು ಮುಂದಾಗಬೇಕು ಜೊತೆಗೆ ಗ್ರಾಹಕರಿಗೆ ಖಾತೆ ತೊರೆಯುವದನ್ನು ಬಿಡುವಂತೆ ಮನವೊಲಿಸಲು ಮುಂದಾಗಬೇಕು ಎಂದರು.

ಗದಗ ವಿಭಾಗ ನಿಗದಿತ ಗುರಿ ಸಾಧನೆ ಹಿನ್ನಲೆಯಲ್ಲಿ ರಾಜ್ಯ ಮಟ್ಟದಲ್ಲಿ ಉಳಿತಾಯ ಸೇರಿದಂತೆ ಎಲ್ಲಾ ವಿಭಾಗದಲ್ಲಿ ಮುಂಚೂಣಿ ಸ್ಥಾನದ ಹಿನ್ನಲೆ ಹೊಂದಿದೆ. ಆದರೇ, ಪ್ರಸ್ತುತ ಇನ್ನೂ ಹೆಚ್ಚೆಚ್ಚು ಖಾತೆ ಆರಂಭಕ್ಕೆ ಮುಂದಾಗಬೇಕು ಎಂದರು.

ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇದಕ್ಕೂ ಮುನ್ನ ಗದಗ ಐಪಿಪಿಬಿ ಮ್ಯಾನೇಜರ್ ಆನಂದ ಸಾಗರ, ಗದಗ ಉಪ ವಿಭಾಗದ ಸಹಾಯಕ ಅಧೀಕ್ಷಕರಾದ ಶ್ರೀಕಾಂತ ಜಾದವ, ರೋಣ ಉಪ ವಿಭಾಗದ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ ಮಾತನಾಡಿದರು. ಪ್ರಶಸ್ತಿ ಪುರಸ್ಕೃತರ ಪರವಾಗಿ ಬಸವರಾಜ ಮಡಿವಾಳರ ಮಾತನಾಡಿದರು. ಇದೇ ವೇಳೆ ಅಂಚೆ ಪೇದೆಯಿಂದ ಪದೋನ್ನತಿ ಪಡೆದ ಸರೋಜಾ ಪಟ್ಟಣಶೆಟ್ಟಿ ಅವರನ್ನು ಸನ್ಮಾನಿಸಿ, ಗೌರವಿಸಿಲಾಯಿತು.

ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕಾದ ವಿ. ಸುನೀಲಕುಮಾರ ಪಾಲ್ಗೊಂಡಿದ್ದರು. ಅನೀತಾ ಕುರಿ ಸ್ವಾಗತಿಸಿದರು.ಅಂಚೆ ಸಹಾಯಕ ಬಸವರಾಜ ಶೇಡದ, ಶ್ರೀದೇವಿ ಕಲಕೇರಿ ನಿರೂಪಿಸಿದರು. ಭೀಮಣ್ಣ ದೊಡ್ಡಮನಿ ವಂದಿಸಿದರು.

ಸಾರ್ವಜನಿಕರ ಸಮಸ್ಯೆಗಳ ಅಹವಾಲುಗಳ ಸ್ವೀಕರ

ಚನ್ನಗಿರಿ : ತಾಲೂಕಿನ ವ್ಯಾಪ್ತಿಯಲ್ಲಿ ಸಾಕಷ್ಟು ಸಮಸ್ಯೆಗಳು ಇದ್ದು ಅಂತಹ ಸಾರ್ವಜನಿಕರ ಸಮಸ್ಯೆಗಳನ್ನು ಅಹವಾಲುಗಳನ್ನು ಸ್ವೀಕರಿಸುವ ಉದ್ದೇಶದಿಂದ ಪ್ರತಿ ತಿಂಗಳು ಲೋಕಾಯುಕ್ತ ಆಹವಾಲು ಸ್ವೀಕಾರ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ದಾವಣಗೆರೆ ಲೋಕಾಯುಕ್ತ ಎಸ್ಪಿ ಎಂ.ಎಸ್.ಕೌಲಾಪೊರೆ ಹೇಳಿದರು.ಬುಧವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಲೋಕಾಯುಕ್ತ ಕಚೇರಿಯಿಂದ ಹಮ್ಮಿಕೊಳ್ಳಲಾಗಿದ್ದ ಸಾರ್ವಜನಿಕರ ಆಹವಾಲು ಸ್ವೀಕಾರ ಸಭೆಯಲ್ಲಿ ಮಾತನಾಡಿ ಇಂದು ಒಟ್ಟು 11 ಪ್ರಕರಣಗಳ ಕುರಿತು ಅರ್ಜಿಗಳು ಬಂದಿದ್ದು ಹೆಚ್ಚು ಸರ್ವೇ ಮತ್ತು ಕಂದಾಯ ಇಲಾಖೆಗೆ ಸೇರಿವೆ. ಜನರು ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡುವಲ್ಲಿ ಇಲಾಖೆಯೊಂದಿಗೆ ಕೈಜೋಡಿಸಬೇಕು.

ಲಂಚ ಪಡೆಯುವುದು ಮತ್ತು ನೀಡುವುದು ಎರಡು ಭ್ರಷ್ಟಾಚಾರದ ಒಂದೇ ನಾಣ್ಯದ ಎರಡು ಮುಖಗಳಂತೆ ಲಂಚ ಪಡೆಯಲು ಒತ್ತಾಯ ಮಾಡಿದರೆ ಅಂತಹ ಪ್ರಕರಣಗಳನ್ನು ಸಹ ಗಂಬೀರವಾಗಿ ಪರಿಗಣಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ನಾಗರಾಜ್, ಇ.ಓ. ಪ್ರಕಾಶ್, ಲೋಕಾಯುಕ್ತ ಡಿ.ವೈ.ಎಸ್‌ಪಿ. ಕಲಾವತಿ, ಸಿ.ಪಿ.ಐ. ಸರಳ, ಸಿಬ್ಬಂದಿಗಳಾದ ಗಿರೀಶ್ ಮಂಜುನಾಥ್, ಕನ್ನಪ್ಪ, ಕೋಟಿನಾಯ್ಕ , ಮೋಹನ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

ವೈದ್ಯಕೀಯ ವೆಚ್ಚ ಮರು ಪಾವತಿಗೆ ಅರ್ಜಿ ಆಹ್ವಾನ

ಚಿಕ್ಕಬಳ್ಳಾಪುರ: ಗೌರಿಬಿದನೂರು ನಗರಸಭಾ ವ್ಯಾಪ್ತಿಯಲ್ಲಿ ವಾಸವಾಗಿರುವ ಬಡತನ ರೇಖೆಗಿಂತ ಕೆಳಮಟ್ಟದ ಪರಿಶಿಷ್ಟ ಪಂಗಡದ (ಬಿ.ಪಿ.ಎಲ್) ಜನಾಂಗದವರಿಗೆ ವೈಧ್ಯಕೀಯ ವೆಚ್ಚ ಮರು ಪಾವತಿಗಾಗಿ ಈ ಮೂಲಕ ತಿಳಿಯಪಡಿಸುವುದನೇಂದರೆ 2025–26ನೇ ಸಾಲಿನ ಎಸ್.ಎಫ್.ಸಿ ಯೋಜನೆಯ ಟಿ.ಎಸ್.ಪಿ ಕ್ರಿಯಾ ಯೋಜನೆಯ ಅನುಮೋದನೆಯಂತೆ ಪರಿಶಿಷ್ಟ ಪಂಗಡದ (ಬಿ.ಪಿ.ಎಲ್) ಜನಾಂಗದವರಿಗೆ ವೈದ್ಯಕೀಯ ವೆಚ್ಚ ಮರು ಪಾವತಿಗಾಗಿ (ಒಬ್ಬರಿಗೆ ರೂ 5000/– ಮಾತ್ರ) ಸವಲತ್ತು ನೀಡಲು ಅರ್ಜಿಗಳನ್ನು ಆಹ್ವಾನಿಲಾಗಿದೆ. ಆಸಕ್ತಿವುಳ್ಳವರು ಈ ಕಚೇರಿಯಿಂದ ಅರ್ಜಿಗಳನ್ನು ಪಡೆದು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ದಾಖಲಾತಿಗಳನ್ನು ಲಗತ್ತಿಸಿ ಡಿಸೆಂಬರ್ 12 ಆಸಕ್ತಿವುಳ್ಳವರು ಈ ಕಚೇರಿಯಿಂದ ಅರ್ಜಿಗಳನ್ನು ಪಡೆದು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ದಾಖಲಾತಿಗಳನ್ನು ಲಗತ್ತಿಸಿ ಡಿಸೆಂಬರ್ 12 ರಂದು ಸಂಜೆ 5 ಗಂಟೆಯೊಳಗೆ ಕಚೇರಿಗೆ ಸಲ್ಲಿಸತಕ್ಕದ್ದು, ತಡವಾಗಿ ಬಂದ ಅರ್ಜಿಗಳನ್ನು ಹಾಗೂ ಅಪೂರ್ಣವಾದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ದಾಖಲಾತಿಗಳು:1. ಆದಾಯ ಪ್ರಮಾಣ ಪತ್ರ, 2. ಆಹಾರ ಪಡಿತರ ಚೀಟಿ (ಬಿ.ಪಿ.ಎಲ್), 3. ಆಧಾರ್ ಕಾರ್ಡ್, 4. ಚುನಾವಣಾ ಗುರುತಿನ ಚೀಟಿ, 5. ಬ್ಯಾಂಕ್ ಖಾತೆಯ ಜೆರಾಕ್ಸ್ ಪ್ರತಿ, 6. ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರ, 7. ಜಿಲ್ಲಾ ವೈದ್ಯಧಾಕಾರಿಗಳು. ಇವರಿಂದ ವೈದ್ಯಕೀಯ ವೆಚ್ಚಕ್ಕೆ ಧೃಡೀಕರಣ ಪತ್ರಗಳನ್ನು ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ವೇಳೆಯಲ್ಲಿ ಶೇ.24.10, ಶೇ.7.25, ಶೇ.5 ರ ವಿಷಯ ನಿರ್ವಾಹಕರನ್ನು ಸಂರ್ಪಕಿಸಬಹುದೆಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಕ್ಕಳ ಪ್ರತಿಭೆಯನ್ನು ಪ್ರದರ್ಶನ ಮಾಡಲು ಪ್ರತಿಭಾ ಕಾರಂಜಿ ಕಾರ್ಯಕ್ರಮವು ಸೂಕ್ತ ವೇದಿಕೆ

ಚನ್ನಗಿರಿ : ಮಕ್ಕಳಲ್ಲಿ ಇರುವಂತಹ ಬಹುಮುಖ ಪ್ರತಿಭೆಯನ್ನು ಪ್ರದರ್ಶನ ಮಾಡಲು ಪ್ರತಿಭಾ ಕಾರಂಜಿ ಕಾರ್ಯಕ್ರಮವು ಸೂಕ್ತ ವೇದಿಕೆಯಾಗಿದ್ದು ಮಕ್ಕಳು ಇಂತಹ ಕಾರ್ಯಕ್ರಮಗಳಲ್ಲಿ ಮುಕ್ತವಾಗಿ ಬಾಗವಹಿಸುವ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ಬಿ.ಇ.ಓ. ಜಯ್ಯಪ್ಪ ಹೇಳಿದರು.

ಬುಧವರ ಪಟ್ಟಣದ ಸರಕಾರಿ ಬಾಲಿಕಾ ಪ್ರೌಡಶಾಲೆಯ ಸಭಾಂಗಣದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಮಗ್ರ ಶಿಕ್ಷಣ ಯೋಜನೆಯಡಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಚನ್ನಗಿರಿ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಕಲೆ, ಸಾಂಸ್ಕೃತಿಕ ಚಟುವಟಿಕೆಗಳನ್ನು ಶ್ರೀಮಂತಗೊಳಿಸುವ ಉದ್ದೇಶದಿಂದ ಇಲಾಖೆಯು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ನಾಡಿಗೆ ಬೇಕಾಗುವಂತಹ ಕಲೆಕಾರರನ್ನು ಸಾಹಿತ್ಯ ಕಾರರನ್ನು ಬೆಳೆಸುವ ಮತ್ತು ಬೆಳಕಿಗೆ ತರುವುದು ಮುಖ್ಯ ಉದ್ದೇಶವಾಗಿದೆ. ಚನ್ನಗಿರಿ ತಾಲೂಕಿನ ಮಾವಿನಕಟ್ಟೆ ಪ್ರೌಡಶಾಲೆಯ ವಿದ್ಯಾರ್ಥಿಗಳು ನಾಟಕ ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟಕ್ಕೆ ಹೋಗಿ ಪ್ರದರ್ಶನ ಮಾಡಿರುವುದು ಹೆಮ್ಮೆಯ ವಿಷಯವಾಗಿದೆ. ಪ್ರತಿಭಾ ಕಾರಂಜಿಯಲ್ಲಿ ಮಕ್ಕಳು ಮತ್ತು ಶಿಕ್ಷಕರ ಶ್ರಮ ಹೆಚ್ಚಾಗಿದೆ ಎಂದರು.

ಕ್ಷೇತ್ರ ಸಮನ್ವಯಾಧಿಕಾರಿ ಡಾ. ಎಸ್.ಶಂಕರಪ್ಪ ಮಾತನಾಡಿ ಸರಕಾರವು ಮಕ್ಕಳ ಕಾರ್ಯಕ್ರಮಕ್ಕಾಗಿ ಸಾಕಷ್ಟು ಹಣವನ್ನು ವ್ಯಯ ಮಾಡುತ್ತಿದ್ದು ಈ ಎಲ್ಲಾ ಕಾರ್ಯಕ್ರಮಗಳು ಮಕ್ಕಳ ಕಾರ್ಯಕ್ರಮವಾಗಿದೆ. ಮಕ್ಕಳಿಂದಲೇ ಶಿಕ್ಷಕರು ಅದ್ದರಿಂದ ಶಿಕ್ಷಕರು ಮಕ್ಕಳ ಬಗ್ಗೆ ಹೆಚ್ಚು ಗಮನಹರಿಸುವ ಮೂಲಕ ಪಠ್ಯ ಚಟುವಟಿಕೆಗಳ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಗಳಿಗೆ ಹೆಚ್ಚಿನ ಗಮನಹರಿಸಬೇಕು ಎಂದರು. ಇ.ಸಿ.ಓ ರಶ್ಮಿ ಹೆಗಡೆ ಮಾತನಾಡಿ ಒಂದು ಶಾಲೆಯು ಅಭಿವೃದ್ಧಿಯತ್ತ ಸಾಗಬೇಕಾದರೆ ಮುಖ್ಯೋಪಧ್ಯಾಯರ ಮತ್ತು ಸಹ ಶಿಕ್ಷಕರ ಬಾಗವಹಿಸುವಿಕೆ ಆಗತ್ಯವಾಗಿದ್ದು ಇಲ್ಲಿನ ಮುಖ್ಯ ಶಿಕ್ಷಕರು ಇದನ್ನು ಸಮರ್ಪಕವಾಗಿ ನಿರ್ವಹಿಸುತ್ತಿದ್ದಾರೆ. ಪ್ರತಿಭಾ ಕಾರಂಜಿಯಲ್ಲಿ ಬಾಗವಹಿಸುವಂತಹ ತೀರ್ಪಗಾರರು ಯಾವುದೇ ಒತ್ತಡಗಳಿಗೆ ಒಳಗಾಗದೇ ನ್ಯಾಯಯುತವಾದ ತೀರ್ಪನ್ನು ನೀಡಬೇಕು ಎಂದರು. ಮುಖ್ಯೋಪಧ್ಯಾಯ ಬಸವರಾಜಪ್ಪ ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಧನುಂಜಯ್ ಕಾರ್ಯಕ್ರಮವನ್ನು ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷ ಬಿ.ಎಸ್.ಗಣೇಶ್, ಎಸ್.ಡಿ.ಎಂ.ಸಿ. ಉಪಾಧ್ಯಕ್ಷ ಬಿ.ಕೆ. ಮಂಜುನಾಥ್. ಮುಖ್ಯೋಪಧ್ಯಾಯರುಗಳು ಮತ್ತು ಶಾಲಾಭಿವೃದ್ಧಿ ಸಮಿತಿ ಸದಸ್ಯರು ಹಾಜರಿದ್ದರು.

ಇಂದು ರಾಜ್ಯಾದ್ಯಂತ ಶಾಲಾ ಕಾಲೇಜುಗಳಲ್ಲಿ ಪೋಷಕರು–ಶಿಕ್ಷಕರ ಸಭೆ

ಚಿಕ್ಕಮಗಳೂರು: ಎಲ್ಲ ಸರ್ಕಾರಿ ಶಾಲಾಕಾಲೇಜುಗಳ ಎಲ್ಲ ಪ್ರಮುಖ ಪಾಲುದಾರರನ್ನು ತಲುಪಲು ಇಂದು ಮಕ್ಕಳ ದಿನಾಚರಣೆಯ ಪ್ರಯುಕ್ತ ರಾಜ್ಯಾದ್ಯಂತ ಏಕಕಾಲದಲ್ಲಿ 2025–26ನೇ ಸಾಲಿನ ಪೋಷಕ–ಶಿಕ್ಷಕರ ಮಹಾಸಭೆಯನ್ನು ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ.ಸರ್ಕಾರಿ ಶಾಲೆಗಳು ಮತ್ತು ಕಾಲೇಜುಗಳು ಎಲ್ಲಾ ಅರ್ಹ ವಯಸ್ಸಿನ ಮಕ್ಕಳಿಗೆ ಒಳಗೊಳ್ಳುವಿಕೆ. 'ಪ್ರವೇಶಾವಕಾಶ ಮತ್ತು ಸಮಾನತೆಯ ಮೂಲಕ ಶಿಕ್ಷಣವನ್ನು ಒದಗಿಸುತ್ತವೆ. ಸರ್ಕಾರಿ ಶಾಲೆ, ಕಾಲೇಜುಗಳು ಎಸ್.ಡಿ.ಎಂ.ಸಿ., ಸಿ.ಡಿ.ಸಿ. ಮತ್ತು ಒಟ್ಟಾರೆ ಸಮುದಾಯದ ಹಿತಾಸಕ್ತಿಗಳ ಫಲಶ್ರುತಿಯಾಗಿವೆ. ಈ ನಿಟ್ಟಿನಲ್ಲಿ ಶಾಲಾಕಾಲೇಜುಗಳಲ್ಲಿ ದಾಖಲಾತಿಯನ್ನು ಹೆಚ್ಚಿಸುವ ಮೂಲಕ ಸರ್ಕಾರಿ ಶಾಲಾ–ಕಾಲೇಜುಗಳ ಬಗ್ಗೆ ಪೋಷಕರಲ್ಲಿ ಭರವಸೆಯನ್ನು ಹೆಚ್ಚಿಸಲು ಉದ್ದೇಶಿಸಲಾಗಿದೆ.ರಾಷ್ಟ್ರ ನಿರ್ಮಾಣ ಮತ್ತು ಚ